ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೫೧ Volume 151	ಬೆಂಗಳೂರು, ಗುರುವಾರ, ಮಾರ್ಚ್ ೩, ೨೦೧೬ (ಫಾಲ್ಗುಣ ೧೩, ಶಕ ವರ್ಷ ೧೯೩೭) Bengaluru, Thursday, March 3, 2016 (Phalguna 13, Shaka Varsha 1937)	ಸಂಚಿಕೆ ೯ Issue 9

ಭಾಗ ೪ಎ

ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು ಮತ್ತು ಅಧ್ಯಾದೇಶಗಳು, ಕೇಂದ್ರದ ಮತ್ತು ರಾಜ್ಯದ ಶಾಸನಗಳ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ರಾಜ್ಯಾಂಗದ ಮೇರೆಗೆ ರಾಜ್ಯಪಾಲರು ಮಾಡಿದ ನಿಯಮಗಳು ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯವು ಮಾಡಿದ ನಿಯಮಗಳು

HOME SECRETARIAT

NOTIFICATION

No. HD 08 POP 2016, Bengaluru, Dated: 09-02-2016

In exercise of the powers conferred by clause (s) of section 2 of the Code of Criminal Procedure, 1973, (Central Act 2 of 1974), and in partial modification of earlier notification issued in this behalf, the Government of Karnataka, hereby declare that with effect from the date of publication of this notification in the Offical Gazette, the areas and places specified in column (3) of the schedule below, shall cease to be within the jurisdiction of the police station specified in column (4) thereof and the said areas and places shall be included in the police station specified in column (2) thereof.

SCHEDULE

Name of the Unit/ Sub-Division/ Police Circle	Name of the Police station in which the areas and places mentioned in column (3) shall be included	Name of the areas and places	Name of the police station from the jurisdiction of which the areas and place mentioned in column (3) shall be excluded
1	2	3	4
Police Commissioner Bengaluru City, Southeast Division, Madivala Sub Division	Bommanahalli Police Station, Bengaluru City	(1) Bommanahalli (2) Hongasandra (3) New Mico Layout (4) Srinivasa Layout (5) Kakappa Layout (6) Muneshwara Nagar (Behind Golden Apartment) (7) Supreem Layout (8) SBI Officers Colony (9) Manjunatha Layout (10) Doctor Layout	Madivala Police Station, Bengaluru City

Name of the Unit/ Sub-Division/ Police Circle	Name of the Police station in which the areas and places mentioned in column (3) shall be included	Name of the areas and places	Name of the police station from the jurisdiction of which the areas and place mentioned in column (3) shall be excluded
1	2	3	4
		(11) Kodichikkanahalli (12) Devarachikkanahalli Main Road (13) Viratnagara (14) Rupena Agrahara (15) K.A.S. Layout (16) Gulbarga Colony (17) Madivala Lake (18) Someshwara Colony (19) BTM Layout 2nd Stage 29th Main Road (20) Madina Nagara (21) Mangammanapalya Om Shakti Layout (22) Vajapeyee Nagara (23) Lakshmi Layout (24) Garvebavi Palya (25) Munireddy Layout (26) Bandepalya (27) Kudlu Gate (28) Muneshwara Nagar (29) ITI Layout (30) Hosapalya	

By Order and in the name of the Governor of Karnataka

B.N. Devaraj

Under Secretary to Government (I/C)

Home Department (Police Expenditure)

PR-255

SC-100

FINANCE SECRETARIAT

NOTIFICATION

NO. FD 130 EXP-12 2015, BENGALURU, Dated: 8TH September 2015

In exercise of the powers conferred by sub-section (1) of Section 25 of the Karnataka Transparency in Public Procurements Act, 1999 (Karnataka Act 29 of 2000) the Government of Karnataka hereby makes the following rules further to amend the Karnataka Transparency in Public Procurement Rules, 2000, namely:-

1. **Title and Commencement:-** (1) These rules may be called the Karnataka Transparency in Public Procurement (Amendment) Rules, 2015.

   (2) They shall come into force from the date of their publication in the Official Gazette.

2. **Amendment of rule 25 :-** In the Karnataka Transparency in Public Procurements Rules, 2000 (herein after referred to as the said rules, in rule 25, in sub-rule (2),-

   (a) for the proviso and Explanation, the following shall be substituted namely :-

"Provided that for a period of five years 01-10-2014, Good manufactured by Micro and Small Enterprise located in the State shall be given fifteen percent price preference against the large and Medium Industries of the State and Industries of other States during Government Departments purchases, subject to the following conditions, namely :-

(i) An enterprise shall be registered with the Director of Industries and Commerce, Government of Karnataka as a Micro and Small Enterprises, under Micro Small and Medium Enterprises Development Act, 2006, (Central Act 27 of 2006) ; and

(ii) An enterprise shall produce a certificate obtained from the said authority certifying that it is a Micro and small Enterprises.

(b) after clause (e), the following shall be inserted, namely :-

"(f) in a tender where the tenderers are both from the State of Karnataka as well as from outside the State of Karnataka, the Sales Tax/Vat shall be excluded for the evaluation of the price."

3. Amendment of rule 26:- In rule 26 of the said rules, after sub rule (4), the following shall be inserted, namely :-

"(5) Micro and Small Enterprises registered with NSIC under a single point vendor registration scheme, shall be facilitated by providing tenders sets free of cost, exempting from payment of Earnest Money Deposit during purchases by all Government Department and State owned PSUs."

By Order and in the name of the Governor of Karnataka

N.B. GIRIJAPPANAVAR
Under Secretary to Government
Finance Department
(Procurement Cell)

PR-256
SC-500

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ:ಆರ್‌ಡಿ:30:ಎಲ್‌ಜಿಜೆ:2014, ಬೆಂಗಳೂರು, ದಿನಾಂಕ: 18-01-2016.

ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94(ಎ)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬಾಗಲಕೋಟೆ ಜಿಲ್ಲೆ, **ಬಾಗಲಕೋಟೆ ವಿಧಾನಸಭಾ ಕ್ಷೇತ್ರದ** ಬಗರ್ ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಗೆ ಈ ಕೆಳಕಂಡ ಅಧಿಕಾರಿ ಹಾಗೂ ಅಧಿಕಾರೇತರ ಸದಸ್ಯರನ್ನು ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಾಮ ನಿರ್ದೇಶನ ಮಾಡಿ ಆದೇಶಿಸಲಾಗಿದೆ.

ಕ್ರಮ ಸಂಖ್ಯೆ	ವಿಧಾನಸಭಾ ಕ್ಷೇತ್ರ	ಸದಸ್ಯರ ಹೆಸರು & ವಿಳಾಸ	ಪ್ರವರ್ಗ
1	**ಬಾಗಲಕೋಟೆ**	1) ಶ್ರೀ ಮೇಟಿ ಹುಲಿಯಪ್ಪ ಯಮನಪ್ಪ, ಸದಸ್ಯರು ಬಾಗಲಕೋಟೆ ವಿಧಾನ ಸಭಾ ಕ್ಷೇತ್ರ.	ಅಧ್ಯಕ್ಷರು
		2) ಶ್ರೀ ಸಿದ್ದಪ್ಪ ಬಸಪ್ಪ ಮೆಳ್ಳಿಗೇರಿ, ಸಾ: ಬಿಲ್‌ಕೆರೂರು.	ಸದಸ್ಯರು (ಸಾಮಾನ್ಯ)
		3) ಶ್ರೀ ಮಲ್ಲಿಕಾರ್ಜುನ ಹನುಮಪ್ಪ ಮಾದರ, ಸಾ:ಚಿಕ್ಕಮುರಮಟ್ಟಿ.	ಸದಸ್ಯರು (ಪ.ಜಾತಿ)
		4) ಶ್ರೀಮತಿ ಚಂದ್ರವ್ವ ರಾಮನಗೌಡ ಪಾಟೀಲ್, ಸಾ:ತಿಮ್ಮಾಪುರ.	ಸದಸ್ಯರು (ಮಹಿಳೆ)
		5) ತಹಶೀಲ್ದಾರರು, ಬಾಗಲಕೋಟೆ ತಾಲ್ಲೂಕು.	ಸದಸ್ಯ ಕಾರ್ಯದರ್ಶಿ

PR-58
SC-25

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಮಹಾಂತೇಗೌಡ ಎಸ್.ಎಲ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ. (ಭೂ ಮಂಜೂರಾತಿ-3)

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ:ಸಇ 541 ಎಂಆರ್‌ಇ 2015, ಬೆಂಗಳೂರು, ದಿನಾಂಕ: 18–01–2016.

ಅಧಿಸೂಚನೆ ಸಂ:ಸಇ/34/ಎಂಆರ್‌ಇ/1/2011, ದಿ:24/06/2011ರ ಮೂಲಕ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 144 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕೊಪ್ಪ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯನ್ನು ಶೃಂಗೇರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯೊಂದಿಗೆ ವಿಲೀನಗೊಳಿಸಿ ಕೊಪ್ಪ, ನರಸಿಂಹರಾಜಪುರ ಮತ್ತು ಶೃಂಗೇರಿ ತಾಲ್ಲೂಕುಗಳನ್ನೊಳಗೊಂಡ ಮಾರುಕಟ್ಟೆ ಕ್ಷೇತ್ರಕ್ಕೆ ಶೃಂಗೇರಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯನ್ನು ಸ್ಥಾಪಿಸಿ ಕೇಂದ್ರ ಸ್ಥಾನವನ್ನು ಕೊಪ್ಪದಲ್ಲಿ ನಿಗಧಿಪಡಿಸಿದೆ.

ಮತ್ತು ಆದಕಾರಣ ಕಾಲಕಾಲಕ್ಕೆ ಹೊರಡಿಸಲಾದ ಸರ್ಕಾರಿ ಅಧಿಸೂಚನೆಗಳ ಮೂಲಕ ಶೃಂಗೇರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆ ಕ್ಷೇತ್ರದಲ್ಲಿ ಈ ಕೆಳಕಂಡಂತೆ ನಮೂದಿಸಿದ ಕೃಷಿ ಉತ್ಪನ್ನಗಳನ್ನು ಮಾರಾಟ ನಿಯಂತ್ರಣಕ್ಕೆ ಒಳಪಡಿಸಲಾಗಿದೆ.

1. ಜಾನುವಾರುಗಳು, 2. ಮೇಕೆಗಳು, 3. ಕುರಿಗಳು, 4. ಹತ್ತಿ (ಬೀಜ ತೆಗೆದ ಮತ್ತು ತೆಗೆಯದ), 5. ಎಲ್ಲಾ ಹೂಗಳು, 6.ಸಜ್ಜೆ, 7. ಜವೆ ಗೋಧಿ, 8. ಜೋಳ, 9. ಕಂಬು, 10. ಮೆಕ್ಕೆಜೋಳ, 11. ನವಣೆ, 12. ಭತ್ತ, 13.ರಾಗಿ, 14.ಅಕ್ಕಿ, 15.ಸಾಮೆ (ಸಾವೆ), 16. ಗೋದಿ, 17. ಅಂಟುವಾಳ, 18.ಬೊಂಬು, 19.ಬೆತ್ತ, 20.ಹಿಪ್ಪೆಬೀಜ, 21.ಹೊಂಗೇಬೀಜ, 22.ಬೇವಿನಬೀಜ, 23.ಸೀಗೆಕಾಯಿ, 24.ಹುಣಸೇಹಣ್ಣು, 25.ಹುಣಸೇಬೀಜ, 26.ಸೇಬು, 27.ಬಾಳೆಹಣ್ಣು, 28.ಬೋರೆಹಣ್ಣು, 29.ಹುಳಿಹಣ್ಣುಗಳು, 30.ಚಕ್ಕೋತನ ಹಣ್ಣು, 31.ಪೇರಲೆಹಣ್ಣು (ಸೀಬೆಹಣ್ಣು), 32.ದ್ರಾಕ್ಷಿ, 33.ಹಲಸಿನಹಣ್ಣು, 34.ಜಂಬುನೇರಳೆಹಣ್ಣು, 35.ನಿಂಬೆಹಣ್ಣು, 36.ಕರಬೂಜ, 37,ಮಾವಿನಹಣ್ಣು, 38.ಮೂಸಂಬಿ, 39.ಮರಸೇಬು, 40.ಪೈನಾಪಲ್ (ಅನಾನಸ್), 41.ಪಪ್ಪಾಯಿಹಣ್ಣು (ಪರಂಗಿಹಣ್ಣು), 42.ದಾಳಿಂಬೆಹಣ್ಣು, 43.ಸಪೋಟಾ, 44.ಸಿರ್ದ್ಧೋಟ, 45. ಕಿತ್ತಳೆ, 46. ಕಲ್ಲಂಗಡಿ, 47.ನೆಲಗಡಲೆ(ಶೇಂಗಾ) (ಕಾಯಿ ಮತ್ತು ಬೀಜ), 48.ಹರಳುಬೀಜ, 49.ಹತ್ತಿಬೀಜ, 50.ಅಗಸೆಬೀಜ, 51.ಸಾಸುವೆ, 52.ಹುಚ್ಚೆಳ್ಳು, 53.ಕುಸುಬೆ, 54.ಎಳ್ಳು, 55.ಸೂರ್ಯಕಾಂತಿಬೀಜ, 56.ಸೋಯಾಬಿನ್, 57.ಅಡಿಕೆ, 58.ಗೋಡಂಬಿಬೀಜ, 59.ಒಣಮೆಣಸಿನಕಾಯಿ, 60.ತೆಂಗಿನಕಾಯಿ, 61.ಕೊಬ್ಬರಿ, 62.ಕೊತ್ತಂಬರಿಬೀಜ (ಧನಿಯಾ), 63.ಬೆಳ್ಳುಳ್ಳಿ, 64.ಶುಂಠಿ, 65.ಮೆಂತ್ಯ, 66.ಕಾಳುಮೆಣಸು, 67.ಅರಿಶಿನ, 68.ಅಲಸಂದೆ(ಇಡೀ ಮತ್ತು ಒಡೆದ), 69.ಅವರೆ(ಇಡೀ ಮತ್ತು ಒಡೆದ), 70.ಕಡಲೆ (ಇಡೀ ಮತ್ತು ಒಡೆದ), 71.ಉದ್ದು(ಇಡೀ ಮತ್ತು ಒಡೆದ), 72.ಬುಲ್ಲರ್(ಇಡೀ ಮತ್ತು ಒಡೆದ), 73.ಹೆಸರು (ಇಡೀ ಮತ್ತು ಒಡೆದ), 74.ಹುರುಳಿ, 75.ಲಾಕ್(ಇಡೀ ಮತ್ತು ಒಡೆದ), 76.ಮಡಿಕೆ (ಮಟಕಿ) (ಇಡೀ ಮತ್ತು ಒಡೆದ), 77.ಚೆನ್ನಂಗಿ (ಮಸೂರಿ) (ಇಡೀ ಮತ್ತು ಒಡೆದ), 78.ಬಟಾಣಿ, 79.ತೊಗರಿ (ಇಡೀ ಮತ್ತು ಒಡೆದ), 80.ಮೋತ್ (ಇಡೀ ಮತ್ತು ಒಡೆದ), 81.ಎಲ್ಲಾ ತರಕಾರಿಗಳು (ಸೊಪ್ಪುಗಳು ಸೇರಿಸಿ)(ಗರ್ಕಿನ್ ಹೊರತುಪಡಿಸಿ), 82.ಕಾಯಿಗಳು, 83.ಹಸಿರುಮೆಣಸಿನಕಾಯಿ, 84.ಈರುಳ್ಳಿ, 85.ಆಲೂಗೆಡ್ಡೆ, 86.ಸುವರ್ಣಗೆಡ್ಡೆ, 87.ಸಿಹಿಗೆಣಸು (ಗೆಣಸು), 88.ಟೊಮ್ಯಾಟೋ, 89.ವೀಳ್ಯೆದೆಲೆ, 90.ಬೆಲ್ಲ, 91.ತೆಂಗಿನಕಡ್ಡಿ, 92.ಒಣದ್ರಾಕ್ಷಿ.

ಮತ್ತು ಆದಕಾರಣ, ಮೇಲೆ ನಮೂದಿಸಿದ ಕೃಷಿ ಉತ್ಪನ್ನಗಳ ಪರಿಣಾಮಕಾರಿ ಮಾರಾಟ ನಿಯಂತ್ರಣಕ್ಕಾಗಿ ಶೃಂಗೇರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯನ್ನು ಈ ಕೆಳಗಿನ ಅನುಸೂಚಿಯಲ್ಲಿ ನಿರ್ಧಿಷ್ಟಪಡಿಸಿದಂತೆ ಎರಡು ಪ್ರತ್ಯೇಕ ಕೃಷಿ ಮಾರುಕಟ್ಟೆ ಕ್ಷೇತ್ರಗಳನ್ನಾಗಿ ವಿಭಜಿಸಲು ಸರ್ಕಾರವು ಉದ್ದೇಶಿಸಿದೆ.

ಆದ್ದರಿಂದ, ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966ರ ಕಲಂ 3ನ್ನು ಓದಿ ಕಲಂ 145(1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸರ್ಕಾರವು ಶೃಂಗೇರಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆ ಕ್ಷೇತ್ರವನ್ನು ವಿಭಜಿಸಿ, ಈ ಕೆಳಗಿನ ಅನುಸೂಚಿಯ 4ನೇ ಅಂಕಣದಲ್ಲಿ ನಮೂದಿಸಿದ ಕೃಷಿ ಉತ್ಪನ್ನಗಳ ಮಾರಾಟ ನಿಯಂತ್ರಣಕ್ಕಾಗಿ 3ನೇ ಅಂಕಣದಲ್ಲಿ ನಿರ್ಧಿಷ್ಟಪಡಿಸಿದ ಮಾರುಕಟ್ಟೆ ಕ್ಷೇತ್ರದ ಪರಿಮಿತಿಯನ್ನೊಳಗೊಂಡಂತೆ 2ನೇ ಅಂಕಣದಲ್ಲಿ ನಿರ್ಧಿಷ್ಟಪಡಿಸಿದ ಎರಡು ಪ್ರತ್ಯೇಕ ಮಾರುಕಟ್ಟೆ ಕ್ಷೇತ್ರಗಳನ್ನು ವಿಭಜಿಸಲು ಈ ಮೂಲಕ ಉದ್ದೇಶವನ್ನು ಪ್ರಕಟಿಸಿದೆ.

ಕ್ರ.ಸಂ.	ಮಾರುಕಟ್ಟೆ ಕ್ಷೇತ್ರ	ಮಾರುಕಟ್ಟೆ ಕ್ಷೇತ್ರದ ಪರಿಮಿತಿ	ಕೃಷಿ ಉತ್ಪನ್ನಗಳು
1.	ಶೃಂಗೇರಿ	ಶೃಂಗೇರಿ ತಾಲ್ಲೂಕು	1.ಜಾನುವಾರುಗಳು, 2.ಮೇಕೆಗಳು, 3.ಕುರಿಗಳು, 4.ಹತ್ತಿ (ಬೀಜ ತೆಗೆದ ಮತ್ತು ತೆಗೆಯದ), 5.ಎಲ್ಲಾ ಹೂಗಳು, 6.ಸಜ್ಜೆ, 7.ಜವೆ ಗೋಧಿ, 8.ಜೋಳ, 9.ಕಂಬು, 10.ಮೆಕ್ಕೆಜೋಳ, 11.ನವಣೆ, 12.ಭತ್ತ, 13.ರಾಗಿ, 14.ಅಕ್ಕಿ 15.ಸಾಮೆ (ಸಾವೆ), 16.ಗೋಧಿ, 17.ಅಂಟುವಾಳ, 18.ಬೊಂಬು, 19.ಬೆತ್ತ, 20.ಹಿಪ್ಪೆಬೀಜ, 21.ಹೊಂಗೇಬೀಜ, 22.ಬೇವಿನಬೀಜ, 23.ಸೀಗೇಕಾಯಿ, 24.ಹುಣಸೇಹಣ್ಣು, 25.ಹುಣಸೇಬೀಜ, 26.ಸೇಬು, 27.ಬಾಳೆಹಣ್ಣು, 28.ಬೋರೆಹಣ್ಣು, 29.ಹುಳಿಹಣ್ಣುಗಳು, 30.ಚಕ್ಕೋತನ ಹಣ್ಣು, 31.ಪೇರಲೆಹಣ್ಣು (ಸೀಬೆಹಣ್ಣು), 32.ದ್ರಾಕ್ಷಿ, 33.ಹಲಸಿನಹಣ್ಣು, 34.ಜಂಬುನೇರಳೆಹಣ್ಣು, 35.ನಿಂಬೆಹಣ್ಣು, 36.ಕರಬೂಜ, 37.ಮಾವಿನಹಣ್ಣು, 38.ಮೂಸಂಬಿ, 39.ಮರಸೇಬು, 40.ಪೈನಾಪಲ್ (ಅನಾನಸ್), 41.ಪಪ್ಪಾಯಿಹಣ್ಣು (ಪರಂಗಿಹಣ್ಣು), 42.ದಾಳಿಂಬೆಹಣ್ಣು, 43.ಸಪೋಟಾ,

ಕ್ರ.ಸಂ.	ಮಾರುಕಟ್ಟೆ ಕ್ಷೇತ್ರ	ಮಾರುಕಟ್ಟೆ ಕ್ಷೇತ್ರದ ಪರಿಮಿತಿ	ಕೃಷಿ ಉತ್ಪನ್ನಗಳು
			44.ಸಿದ್ದೋಟ, 45.ಕಿತ್ತಳೆ, 46. ಕಲ್ಲಂಗಡಿ, 47.ನೆಲಗಡಲೆ(ಶೇಂಗಾ) (ಕಾಯಿ ಮತ್ತು ಬೀಜ), 48.ಹರಳುಬೀಜ, 49.ಹತ್ತಿಬೀಜ, 50.ಅಗಸೆಬೀಜ, 51.ಸಾಸುವೆ, 52.ಹುಚ್ಚೆಳ್ಳು, 53.ಕುಸುಬೆ, 54.ಎಳ್ಳು, 55.ಸೂರ್ಯಕಾಂತಿಬೀಜ, 56.ಸೋಯಾಬಿನ್,57.ಅಡಿಕೆ, 58.ಗೋಡಂಬಿಬೀಜ, 59.ಒಣಮೆಣಸಿನಕಾಯಿ, 60.ತೆಂಗಿನಕಾಯಿ, 61.ಕೊಬ್ಬರಿ, 62.ಕೊತ್ತಂಬರಿಬೀಜ(ಧನಿಯಾ), 63.ಬೆಳ್ಳುಳ್ಳಿ, 64.ಶುಂಠಿ, 65.ಮೆಂತ್ಯ, 66.ಕಾಳುಮೆಣಸು, 67.ಅರಿಶಿನ, 68.ಅಲಸಂದೆ(ಇಡೀ ಮತ್ತು ಒಡೆದ), 69.ಅವರೆ (ಇಡೀ ಮತ್ತು ಒಡೆದ), 70.ಕಡಲೆ (ಇಡೀ ಮತ್ತು ಒಡೆದ) 71.ಉದ್ದು (ಇಡೀ ಮತ್ತು ಒಡೆದ), 72.ಬುಲ್ಲರ್ (ಇಡೀ ಮತ್ತು ಒಡೆದ), 73.ಹೆಸರು (ಇಡೀ ಮತ್ತು ಒಡೆದ), 74.ಹುರುಳಿ, 75.ಲಾಕ್ (ಇಡೀ ಮತ್ತು ಒಡೆದ), 76.ಮಡಿಕೆ(ಮಟಕಿ) (ಇಡೀ ಮತ್ತು ಒಡೆದ), 77.ಚೆನ್ನಂಗಿ (ಮಸೂರಿ) (ಇಡೀ ಮತ್ತು ಒಡೆದ), 78.ಬಟಾಣಿ, 79.ತೊಗರಿ (ಇಡೀ ಮತ್ತು ಒಡೆದ), 80.ಮೋತ್ (ಇಡೀ ಮತ್ತು ಒಡೆದ), 81.ಎಲ್ಲಾ ತರಕಾರಿಗಳು (ಸೊಪ್ಪುಗಳು ಸೇರಿಸಿ) (ಗರ್ಕಿನ್ ಹೊರತುಪಡಿಸಿ), 82.ಕಾಯಿಗಳು, 83.ಹಸಿರುಮೆಣಸಿನಕಾಯಿ, 84.ಈರುಳ್ಳಿ, 85.ಆಲೂಗಡ್ಡೆ, 86.ಸುವರ್ಣಗೆಡ್ಡೆ, 87.ಸಿಹಿಗೆಣಸು (ಗೆಣಸು), 88.ಆಲೂಗೆಡ್ಡೆ, 89.ವೀಳ್ಯೆದೆಲೆ, 90.ಬೆಲ್ಲ, 91.ತೆಂಗಿನಕಡ್ಡಿ, 92.ಒಣದ್ರಾಕ್ಷಿ,
2.	ಕೊಪ್ಪ	ಕೊಪ್ಪ, ನರಸಿಂಹರಾಜಪುರ ತಾಲ್ಲೂಕುಗಳು	1.ಜಾನುವಾರುಗಳು, 2.ಮೇಕೆಗಳು, 3.ಕುರಿಗಳು, 4.ಹತ್ತಿ (ಬೀಜ ತೆಗೆದ ಮತ್ತು ತೆಗೆಯದ), 5.ಎಲ್ಲಾ ಹೂಗಳು, 6.ಸಜ್ಜೆ 7.ಜವೆ ಗೋಧಿ, 8.ಜೋಳ, 9.ಕಂಬು, 10.ಮೆಕ್ಕೆಜೋಳ, 11.ನವಣೆ, 12.ಭತ್ತ, 13.ರಾಗಿ, 14.ಅಕ್ಕಿ 15.ಸಾಮೆ (ಸಾವೆ), 16.ಗೋಧಿ, 17.ಅಂಟುವಾಳ, 18.ಬೊಂಬು, 19.ಬೆತ್ತ, 20.ಹಿಪ್ಪೆಬೀಜ, 21.ಹೊಂಗೇಬೀಜ, 22.ಬೇವಿನಬೀಜ, 23.ಸೀಗೇಕಾಯಿ, 24.ಹುಣಸೇಹಣ್ಣು, 25.ಹುಣಸೇಬೀಜ, 26.ಸೇಬು, 27.ಬಾಳೆಹಣ್ಣು, 28.ಬೋರೆಹಣ್ಣು, 29.ಹುಳಿಹಣ್ಣುಗಳು, 30.ಚಕ್ಕೋತನ ಹಣ್ಣು, 31.ಪೇರಲೆಹಣ್ಣು(ಸೀಬೆಹಣ್ಣು) 32.ದ್ರಾಕ್ಷಿ, 33.ಹಲಸಿನಹಣ್ಣು, 34.ಜಂಬುನೇರಳೆಹಣ್ಣು, 25.ನಿಂಬೆಹಣ್ಣು, 36.ಕರಬೂಜ, 37.ಮಾವಿಹಣ್ಣು, 38.ಮೂಸಂಬಿ, 39.ಮರಸೇಬು, 40.ಪೈನಾಪಲ್(ಅನಾನಸ್), 41.ಪಪ್ಪಾಯಿಹಣ್ಣು (ಪರಂಗಿಹಣ್ಣು), 42.ದಾಳಿಂಬೆಹಣ್ಣು, 43.ಸಪೋಟಾ. 44.ಸಿದ್ದೋಟ, 45.ಕಿತ್ತಳೆ, 46.ಕಲ್ಲಂಗಡಿ, 47.ನೆಲಗಡಲೆ(ಶೇಂಗಾ) (ಕಾಯಿ ಮತ್ತು ಬೀಜ), 48.ಹರಳುಬೀಜ, 49.ಹತ್ತಿಬೀಜ, 50.ಅಗಸೆಬೀಜ, 51.ಸಾಸುವೆ, 52.ಹುಚ್ಚೆಳ್ಳು, 53.ಕುಸುಬೆ, 54.ಎಳ್ಳು, 55.ಸೂರ್ಯಕಾಂತಿಬೀಜ, 56.ಸೋಯಾಬಿನ್, 57.ಅಡಿಕೆ, 58.ಗೋಡಂಬಿಬೀಜ, 59.ಒಣಮೆಣಸಿನಕಾಯಿ,60.ತೆಂಗಿನಕಾಯಿ, 61.ಕೊಬ್ಬರಿ, 62.ಕೊತ್ತಂಬರಿಬೀಜ (ಧನಿಯಾ), 63.ಬೆಳ್ಳುಳ್ಳಿ, 64.ಶುಂಠಿ, 65.ಮೆಂತ್ಯ, 66.ಕಾಳುಮೆಣಸು, 67.ಅರಿಶಿನ, 68.ಅಲಸಂದೆ(ಇಡೀ ಮತ್ತು ಒಡೆದ), 69.ಅವರೆ (ಇಡೀ ಮತ್ತು ಒಡೆದ), 70.ಕಡಲೆ (ಇಡೀ ಮತ್ತು ಒಡೆದ), 71.ಉದ್ದು (ಇಡೀ ಮತ್ತು ಒಡೆದ), 72.ಬುಲ್ಲರ್ (ಇಡೀ ಮತ್ತು ಒಡೆದ), 73.ಹೆಸರು (ಇಡೀ ಮತ್ತು ಒಡೆದ), 74.ಹುರುಳಿ, 75.ಲಾಕ್ (ಇಡೀ ಮತ್ತು ಒಡೆದ), 76.ಮಡಿಕೆ(ಮಟಕಿ) (ಇಡೀ ಮತ್ತು ಒಡೆದ), 77.ಚೆನ್ನಂಗಿ (ಮಸೂರಿ) (ಇಡೀ ಮತ್ತು ಒಡೆದ), 78.ಬಟಾಣಿ, 79.ತೊಗರಿ (ಇಡೀ ಮತ್ತು ಒಡೆದ), 80.ಮೋತ್ (ಇಡೀ ಮತ್ತು ಒಡೆದ), 81.ಎಲ್ಲಾ ತರಕಾರಿಗಳು (ಸೊಪ್ಪುಗಳು ಸೇರಿಸಿ)(ಗರ್ಕಿನ್ ಹೊರತುಪಡಿಸಿ), 82.ಕಾಯಿಗಳು, 83.ಹಸಿರುಮೆಣಸಿನಕಾಯಿ, 84.ಈರುಳ್ಳಿ, 85.ಆಲೂಗೆಡ್ಡೆ, 86.ಸುವರ್ಣಗೆಡ್ಡೆ, 87.ಸಿಹಿಗೆಣಸು (ಗೆಣಸು), 88.ಟೊಮ್ಯಾಟೋ, 89.ವೀಳ್ಯೆದೆಲೆ, 90.ಬೆಲ್ಲ, 91.ತೆಂಗಿನಕಡ್ಡಿ, 92.ಒಣದ್ರಾಕ್ಷಿ.

ಮೇಲಿನ ಉದ್ದೇಶಿತ ಪ್ರಸ್ತಾವಕ್ಕೆ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 3 ರನ್ವಯ ಆಕ್ಷೇಪಣೆ/ಸಲಹೆಗಳನ್ನು ಆಹ್ವಾನಿಸಿದ್ದು, ಯಾವುದೇ ಆಕ್ಷೇಪಣೆಗಳು/ಸಲಹೆಗಳು ಇದ್ದಲ್ಲಿ ಈ ಅಧಿಸೂಚನೆಯು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಅಥವಾ ಕನ್ನಡ ದಿನಪತ್ರಿಕೆಯಲ್ಲಿ ಯಾವುದರಲ್ಲಿ ತಡವಾಗಿ ಪ್ರಕಟವಾಗುವುದೋ ಆ ದಿನಾಂಕದಿಂದ 32 ದಿವಸದೊಳಗಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು 560001 ಇವರಿಗೆ ಸಲ್ಲಿಸಲು ಸೂಚನೆ ನೀಡಲಾಗಿದೆ.

PR-59

SC-30

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಲ್.ಸಿ. ಬಸವರಾಜು,

ಸರ್ಕಾರದ ಅಧೀನ ಕಾರ್ಯದರ್ಶಿ–1,

ಸಹಕಾರ ಇಲಾಖೆ.

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 162 ಎಲ್‌ಆರ್‌ಎ 2014, ಬೆಂಗಳೂರು, ದಿನಾಂಕ: 28–07–2015.

ಕರ್ನಾಟಕ ಭೂ ಸುಧಾರಣೆ ಕಾಯ್ದೆ, 1961ರ ಕಲಂ 48ರ ಉಪ ಕಲಂ (1) ರಿಂದ (3)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕುಣಿಗಲ್ ತಾಲ್ಲೂಕು ಭೂ ನ್ಯಾಯ ಮಂಡಳಿಗೆ ಈ ಹಿಂದೆ ಮಾಡಿದ್ದ ಎಲ್ಲಾ ಅಧಿಕಾರೇತರ ಸದಸ್ಯರ ನಾಮ ನಿರ್ದೇಶನಗಳನ್ನು ರದ್ದುಪಡಿಸಿ, ಅವರ ಬದಲಿಗೆ ಈ ಕೆಳಕಂಡವರನ್ನು ಅಧಿಕಾರೇತರ ಸದಸ್ಯರನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಾಮನಿರ್ದೇಶನ ಮಾಡಿ ಕುಣಿಗಲ್ ತಾಲ್ಲೂಕು ಭೂ ನ್ಯಾಯ ಮಂಡಳಿಯನ್ನು ರಚಿಸಿ ಆದೇಶ ಹೊರಡಿಸಿದೆ.

ಭೂ ನ್ಯಾಯ ಮಂಡಳಿಯ ಹೆಸರು	ಸದಸ್ಯರುಗಳ ಹೆಸರು ಮತ್ತು ವಿಳಾಸ	ಮೀಸಲಾತಿ
ತುಮಕೂರು ಜಿಲ್ಲೆ ಕುಣಿಗಲ್ ತಾಲ್ಲೂಕು.	1) ಶ್ರೀ ಬಿ.ಎನ್.ಜಗದೀಶ್ ಬಿನ್ ನಾಗರಾಜಯ್ಯ ಕನ್ನಗುಣಿ, ನಡೆಮಾವಿನಪುರ ಅಂಚೆ, ಕುಣಿಗಲ್ ತಾಲ್ಲೂಕು.	ಸಾಮಾನ್ಯ
	2) ಶ್ರೀ ಎಸ್.ಆರ್. ಚಿಕ್ಕಣ್ಣ ಬಿನ್ ಲೇಟ್ ರಂಗಯ್ಯ ಸಾಲಾಂತ್ರಿಪಾಳ್ಯ ಅರಕೆರೆ ಅಂಚೆ, ಕುಣಿಗಲ್ ತಾಲ್ಲೂಕು.	ಮೀಸಲಾತಿ
	3) ಶ್ರೀ ಅರುಣ್ ಕುಮಾರ್ ಬಿನ್ ಶಿವರಾಮಯ್ಯ ಯಡವಾಣೆ ಗ್ರಾಮ ಮತ್ತು ಅಂಚೆ, ಕುಣಿಗಲ್ ತಾಲ್ಲೂಕು.	ಸಾಮಾನ್ಯ
	4) ಶ್ರೀ ಎ.ಬಿ. ರಂಗಧಾಮಯ್ಯ ಬಿನ್ ಸಣ್ಣ ರಂಗಯ್ಯ , ರಾಯಗೋನಹಳ್ಳಿ ಮಡಿಕೆಹಳ್ಳಿ ಅಂಚೆ, ಕುಣಿಗಲ್ ತಾಲ್ಲೂಕು.	ಸಾಮಾನ್ಯ

PR-61

SC-15

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಬಾಲರಾಜ ದೇವರಖಿದ್ರಾ,

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ.(ಭೂ ಸುಧಾರಣೆ)

FOREST, ECOLOGY AND ENVIRONMENT DEPARTMENT SECRETARIAT

NOTIFICATION

No: FEE 15 FEG 2014, BENGALURU DATED:11.01.2016.

In exercise of the powers conferred by the first and second provisio to Sub-Section (2) of Section 3 of the Karnataka State Civil Services Act, 1978 (Karnataka Act 14 of 1990) the Government of Karnataka hereby makes the following rules further to amend the Karnataka Forest Department Services (Recruitment) Rules 2003 namely :-

RULES

1. **Title and Commencement** :- (1) These rules may be called the Karnataka Forest Department Services (Recruitment) (Amendment) Rules, 2015.

   (2) They shall come into force from the date of their publication in the Official Gazette.

2. **Amendment of Schedule I** : In the Karnataka Forest Department Services (Recruitment) Rules, 2003 (hereinafter refereed as the said rules), in schedule-I, for the entries relating to the category of post of "Assistant Surgeon (Veterinary)" at Serial number 16, for the words and brackets " Assistant Surgeon (Veterinary), the words :Veterinary Officer" shall be substituted.
3. **Amendment of Schedule II** : In sechedule-II of the said rules, for the entries relating to the catergory of post of "Assistant Surgeon (Venterinary)" at serial number 16, for the words and brackets "Assistant Surgeon (Veterinary), the words "Veterinary Officer" shall be substituted namely:-

PR. 62

SC. 500

By Order and in the name of the Governor of Karnataka,

H.C. Rajendrakumar,

Under Secretary to Government (Services),

Forest, Ecology and Environment Department.

ಶಿಕ್ಷಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಡಿ 566 ಎಲ್‌ಐಬಿ 2014, ಬೆಂಗಳೂರು, ದಿನಾಂಕ: 14-01-2016.

ಕರ್ನಾಟಕ ಸಾರ್ವಜನಿಕ ಗ್ರಂಥಾಲಯಗಳು ಅಧಿನಿಯಮ, 1965ರ ಕರ್ನಾಟಕ 10ನೇ ಅಧಿನಿಯಮ ಪ್ರಕರಣ 17ರಲ್ಲಿನ ಪ್ರದತ್ತವಾದ ಅಧಿಕಾರದನ್ವಯ ಬಳ್ಳಾರಿ ಜಿಲ್ಲಾ ಗ್ರಂಥಾಲಯ ಪ್ರಾಧಿಕಾರಕ್ಕೆ 18(1)(ಎ) ರಿಂದ (ಎಂ) ಮತ್ತು (2) ಹಾಗೂ (3)ರ ಪ್ರಕಾರ ಈ ಕೆಳಕಂಡ ಸದಸ್ಯರನ್ನು ನಾಮಕರಣ ಮಾಡಿ ಆದೇಶಿಸಿದೆ.

	ಪ್ರಕರಣ	ವಿವರ	ಪದನಾಮ
18(1)(ಎ)	ಜಿಲ್ಲೆಯ ಡೆಪ್ಯೂಟಿ ಕಮೀಷನರ್‌ರವರು, ಇವರು ಅಧಿಕಾರ ಪ್ರಯುಕ್ತ ಸದರಿ ಪ್ರಾಧಿಕಾರ ವರ್ಗದ ಸಭಾಪತಿಯಾಗಿ (ಚೇರ್ಮನರಾಗಿ) ಇರತಕ್ಕದ್ದು; (ಸಿಇಒ, ಜಿಲ್ಲಾ ಪಂಚಾಯತಿ)	ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.	ಅಧ್ಯಕ್ಷರು
18(1)(ಬಿ)	ಜಿಲ್ಲಾ ವಿದ್ಯಾಧಿಕಾರಿ ಅಥವಾ ಜಿಲ್ಲೆಯ ಎಜ್ಯುಕೇಷನಲ್ ಇನ್ಸ್‌ಪೆಕ್ಟರ್	ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬಳ್ಳಾರಿ	ಸದಸ್ಯರು
18(1)(ಸಿ)	ಜಿಲ್ಲಾ ಅಭಿವೃದ್ಧಿ ಸಭೆಯಿಂದ ಅದರ ಸದಸ್ಯರ ಪೈಕಿ ಚುನಾಯಿತರಾದ ಇಬ್ಬರು ವ್ಯಕ್ತಿಗಳು.	1. ಶ್ರೀ ವಸಂತ ಪಾಟೀಲ್ ಬಿ., ಸಿರಿಗೇರಿ ಕ್ಷೇತ್ರ, ಸಿರುಗುಪ್ಪ ಕ್ಷೇತ್ರ 2. ಶ್ರೀಮತಿ ಕರಿಬಸನಗೌಡರ ರತ್ನಮ್ಮ, ಕೋಗಳಿ ಕ್ಷೇತ್ರ, ತಾ.ಹೆಚ್.ಬಿ.ಹಳ್ಳಿ	ಸದಸ್ಯರು ಸದಸ್ಯರು
18(1)(ಡಿ)	ಐವತ್ತು ಸಾವಿರಕ್ಕಿಂತ ಕಡಿಮೆಯಾಗಿಲ್ಲದ ಜನಸಂಖ್ಯೆಯುಳ್ಳ ಒಂದು ನಗರ ಪಾಲಿಕೆ ಪ್ರದೇಶದ ಮೇಲೆ ಅಧಿಕಾರ ವ್ಯಾಪ್ತಿಯುಳ್ಳದ್ದಾಗಿದ್ದು ಒಂದು ನಗರ ಮಸ್ತಕ ಭಂಡಾರ ಪ್ರಾಧಿಕಾರ ವರ್ಗವು ಸ್ಥಾಪಿತವಾಗಿರುವ ಪ್ರದೇಶದ ಹೊರತು ಬೇರೆ ಜಿಲ್ಲೆಯಲ್ಲಿ ಇರುವ ಪ್ರತಿ ನಗರ ಪಾಲಿಕೆ ಸಭೆಯಿಂದ ಅಥವಾ ಇತರ ನಗರ ಪಾಲಿಕೆ ಸಂಸ್ಥೆಯಿಂದ ಅವುಗಳ ಸದಸ್ಯರುಗಳ ಪೈಕಿ ಚುನಾಯಿಸಲ್ಪಟ್ಟ ವ್ಯಕ್ತಿ:	ನಗರ ಗ್ರಂಥಾಲಯ ಪ್ರಾಧಿಕಾರ ಸ್ಥಾಪಿತವಾಗಿರುವುದರಿಂದ ಅನ್ವಯಿಸುವುದು.	ಸದಸ್ಯರು
18(1)(ಇ)	ಐವತ್ತು ಸಾವಿರಕ್ಕಿಂತ ಕಡಿಮೆ ಜನಸಂಖ್ಯೆಯುಳ್ಳ ಒಂದು ನಗರಪಾಲಿಕೆ ಪ್ರದೇಶದ ಮೇಲೆ ಅಧಿಕಾರ ವ್ಯಾಪ್ತಿಯುಳ್ಳದ್ದಾಗಿದ್ದು ಜಿಲ್ಲೆಯಲ್ಲಿ ಇರುವ ನಗರ ಪಾಲಿಕೆ ಸಭೆಗಳ ಅಥವಾ ಇತರ ಪಾಲಿಕೆ ಸಭೆಗಳ ಅಥವಾ ಇತರ ನಗರ ಪಾಲಿಕೆ ಸಂಸ್ಥೆಗಳ ಸದಸ್ಯರುಗಳ ಪೈಕಿ ರಾಜ್ಯ ಸರ್ಕಾರದವರಿಂದ ನಾಮ ನಿರ್ದೇಶನ ಮಾಡಲ್ಪಟ್ಟ ಇಬ್ಬರು ವ್ಯಕ್ತಿಗಳು;	1. ಶ್ರೀ ಪಂಪಯ್ಯಸ್ವಾಮಿ, ಪಟ್ಟಣ ಪಂಚಾಯಿತಿ, ಕಮಲಾಪುರ. 2. ಶ್ರೀಮತಿ ಬೀಬಿಜಾನ್, ಪುರಸಭೆ, ಹೂವಿನಹಡಗಲಿ	ಸದಸ್ಯರು

	ಪ್ರಕರಣ	ವಿವರ	ಪದನಾಮ
18(1)(ಎಫ್)	ಮೈಸೂರು ಪುಸ್ತಕ ಭಂಡಾರ ಸಂಘದ ಜಿಲ್ಲಾ ಶಾಖೆಯ ಕೌನ್ಸಿಲ್ ಯಾವುದಾದರೂ ಇದ್ದರೆ, ಅದರಿಂದ ನಾಮ ನಿರ್ದೇಶನ ಮಾಡಲ್ಪಟ್ಟ ಒಬ್ಬ ವ್ಯಕ್ತಿ;	ಗ್ರಂಥಾಲಯ ಸಂಘವು ಅಸ್ತತ್ವದಲ್ಲಿರುವುದಿಲ್ಲ.	
18(1)(ಜಿ)	ರಾಜ್ಯ ಸರ್ಕಾರದವರಿಂದ ಜಿಲ್ಲೆಯಲ್ಲಿನ ತಾಲ್ಲೂಕು ಅಭಿವೃದ್ಧಿ ಮಂಡಳಿಗಳ ಸದಸ್ಯರುಗಳ ಪೈಕಿಯಿಂದ ನಾಮ ನಿರ್ದೇಶನ ಮಾಡಲ್ಪಟ್ಟ ಒಬ್ಬ ವ್ಯಕ್ತಿ;	ಶ್ರೀಮತಿ ಜ್ಯೋತಿ, ತಾಲ್ಲೂಕು ಪಂಚಾಯಿತಿ ಸದಸ್ಯರು, ತಾ. ಸಂಡೂರು.	ಸದಸ್ಯರು
18(1) (ಹೆಚ್)	ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿಗಳ ಹಾಗೂ ಟೌನು ಪಂಚಾಯಿತಿಗಳ ಸದಸ್ಯರುಗಳ ಪೈಕಿಯಿಂದ ರಾಜ್ಯ ಸರ್ಕಾರದವರಿಂದ ನಾಮ ನಿರ್ದೇಶನ ಮಾಡಲ್ಪಟ್ಟ ಇಬ್ಬರು ವ್ಯಕ್ತಿಗಳು;	1. ಶ್ರೀ ವಿ.ನಾಗರಾಜ ಕುರುಗೋಡು ತಾ. ಬಳ್ಳಾರಿ. 2.ಶ್ರೀಮತಿ ಶ್ರೀದೇವಿ, ರೂಪನಗುಡಿ, ಬಳ್ಳಾರಿ ತಾ.	ಸದಸ್ಯರು ಸದಸ್ಯರು
18(1)(ಐ)	ಜಿಲ್ಲೆಯಲ್ಲಿನ ಸಹಾಯ ಘೋಷಿತ ಪುಸ್ತಕ ಭಂಡಾರಗಳ ಸಂಬಂಧವಾದ ಆಡಳಿತ ಸಂಸ್ಥೆಗಳ ಸದಸ್ಯರುಗಳ ಪೈಕಿಯಲ್ಲಿ ರಾಜ್ಯ ಸರ್ಕಾರದವರಿಂದ ನಾಮ ನಿರ್ದೇಶನ ಮಾಡಲ್ಪಟ್ಟ ಇಬ್ಬರು ವ್ಯಕ್ತಿಗಳು;	ಅಸ್ತಿತ್ವದಲ್ಲಿರುವುದಿಲ್ಲ.	ಸದಸ್ಯರು
18(1)(ಜೆ)	ರಾಜ್ಯ ಸರ್ಕಾರದವರಿಂದ ಅಧಿಕಾರ ಪ್ರಯುಕ್ತ ನಾಮ ನಿರ್ದೇಶನ ಮಾಡಲ್ಪಟ್ಟ ಜಿಲ್ಲೆಯಲ್ಲಿನ ಒಂದು ಮೊದಲನೆಯ ದರ್ಜೆಯ ಕಾಲೇಜಿನ ಒಬ್ಬರು ಪ್ರಿನ್ಸಿಪಾಲರು;	ಪ್ರಾಚಾರ್ಯರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಳ್ಳಾರಿ.	ಸದಸ್ಯರು
18(1)(ಕೆ)	ರಾಜ್ಯ ಸರ್ಕಾರದವರಿಂದ ಅಧಿಕಾರ ಪ್ರಯುಕ್ತ ನಾಮ ನಿರ್ದೇಶನ ಮಾಡಲ್ಪಟ್ಟ ಜಿಲ್ಲೆಯಲ್ಲಿನ ಒಂದು ಹೈಸ್ಕೂಲಿನ ಒಬ್ಬ ಮುಖ್ಯೋಪಾಧ್ಯಾಯರು;	ಮುಖ್ಯೋಪಾಧ್ಯಾಯರು, ಸರ್ಕಾರಿ ಬಾಲಕಿಯರ ಪ್ರೌಢಶಾಲೆ, ಬಳ್ಳಾರಿ.	ಸದಸ್ಯರು
18(1)(ಎಲ್)	ರಾಜ್ಯ ಸರ್ಕಾರದವರಿಂದ ಅಧಿಕಾರ ಪ್ರಯುಕ್ತ ನಾಮ ನಿರ್ದೇಶನ ಮಾಡಲ್ಪಟ್ಟ ಜಿಲ್ಲೆಯಲ್ಲಿನ ಅಥವಾ ಅದರ ಒಂದು ಭಾಗದಲ್ಲಿ ಅಧಿಕಾರ ವ್ಯಾಪ್ತಿ ಹೊಂದಿರುವ ವಿದ್ಯಾಭ್ಯಾಸ ಇಲಾಖೆಯ ಒಬ್ಬ ಪದಾಧಿಕಾರಿ;	ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬಳ್ಳಾರಿ.	ಸದಸ್ಯರು
18(1)(ಎಂ)	ಸಾಮಾನ್ಯವಾಗಿ ಜಿಲ್ಲೆಯಲ್ಲಿ ವಾಸವಾಗಿರುವ ವ್ಯಕ್ತಿಗಳ ಪೈಕಿ ರಾಜ್ಯ ಸರ್ಕಾರದವರಿಂದ ನಾಮ ನಿರ್ದೇಶನ ಮಾಡಲ್ಪಟ್ಟ ಮೂವರು ವ್ಯಕ್ತಿಗಳು ಇರತಕ್ಕದ್ದು;	1. ಶ್ರೀ ಟಿ.ಕೆ ಗುರುರಾಜಾಚಾರ್, ನಂ.312, 1ನೇ ಮಹಡಿ, 3ನೇ ಮುಖರಸ್ತೆ, ಪಾರ್ವತಿನಗರ, ಬಳ್ಳಾರಿ–583101. 2. ಶ್ರೀ ಟಿ.ಜಿ.ವಿಠಲ, ಎಲ್.ಐ.ಸಿ. ಗಾಂಧಿಭವನ, ಬಳ್ಳಾರಿ. 3. ಶ್ರೀ ಎನ್ ಗಿರಿ, ನ್ಯಾಯವಾದಿಗಳು, ಬಳ್ಳಾರಿ.	ಸದಸ್ಯರು ಸದಸ್ಯರು ಸದಸ್ಯರು
18(2)	ಜಿಲ್ಲಾ ಪುಸ್ತಕ ಭಂಡಾರದ ಪ್ರಾಧಿಕಾರ ವರ್ಗದ ಉಪಸಭಾಪತಿಯವರ (ವೈಸ್ ಚೇರ್ಮನ್ನರು) ಸದಸ್ಯರಿಂದ ಅವರ ಪೈಕಿಯಿಂದಲೇ ಚುನಾಯಿಸಲ್ಪಡತಕ್ಕದು.	ಗ್ರಂಥಾಲಯ ಪ್ರಾಧಿಕಾರ ಪುನರ್ ರಚನೆ ಆದ ಮೊದಲನೇ ಸಭೆಯಲ್ಲಿ ಹಾಜರಾದ ಸದಸ್ಯರಲ್ಲಿ ಉಪಾಧಕ್ಷರನ್ನು ಆರಿಸಲು ಅವಕಾಶವಿದೆ. ಆದ್ದರಿಂದ ಹೆಸರನ್ನು ಸೂಚಿಸಿರುವುದಿಲ್ಲ.	ಸದಸ್ಯರು

	ಪ್ರಕರಣ	ವಿವರ	ಪದನಾಮ
18(3)	ಜಿಲ್ಲಾ ಮುಖ್ಯ ಪುಸ್ತಕ ಭಂಡಾರಾಧಿಕಾರಿಯು ಅಧಿಕಾರ ಪ್ರಯುಕ್ತ ಜಿಲ್ಲಾ ಪುಸ್ತಕ ಭಂಡಾರ ಪ್ರಾಧಿಕಾರ ವರ್ಗದ ಮತ್ತು ಸದರಿ ಪ್ರಾಧಿಕಾರ ವರ್ಗದ ಸಮಿತಿಗಳ ಕಾರ್ಯದರ್ಶಿಯಾಗಿರತಕ್ಕದು.	ಮುಖ್ಯ ಗ್ರಂಥಾಲಯಾಧಿಕಾರಿಗಳು, ಜಿಲ್ಲಾ ಕೇಂದ್ರ ಗ್ರಂಥಾಲಯ, ಬಳ್ಳಾರಿ.	ಸದಸ್ಯರು

PR-63
SC-100

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ವಿ.ರಾಮಕೃಷ್ಣಯ್ಯ,
ಸರ್ಕಾರದ ಅಧೀನ ಕಾರ್ಯದರ್ಶಿ(ಸಾಮಾನ್ಯ)(ಪ್ರ),
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

ಶಿಕ್ಷಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಡಿ 210 ಎಲ್‌ಐಬಿ 2015, ಬೆಂಗಳೂರು, ದಿನಾಂಕ: 14-01-2016.

ಕರ್ನಾಟಕ ಸಾರ್ವಜನಿಕ ಗ್ರಂಥಾಲಯಗಳು ಅಧಿನಿಯಮ, 1965ರ ಕರ್ನಾಟಕ 10ನೇ ಅಧಿನಿಯಮ ಪ್ರಕರಣ 17ರಲ್ಲಿನ ಪ್ರದತ್ತವಾದ ಅಧಿಕಾರದನ್ವಯ ಮಂಡ್ಯ ನಗರ ಗ್ರಂಥಾಲಯ ಪ್ರಾಧಿಕಾರಕ್ಕೆ 17(1)(ಎ) ರಿಂದ (ಹೆಚ್) ಮತ್ತು 17(2) ಗೆ ಸಂಬಂಧಿಸಿದಂತೆ ಈ ಕೆಳಕಂಡ ಸದಸ್ಯರನ್ನು ನಾಮಕರಣ ಮಾಡಿ ಆದೇಶಿಸಿದೆ.

	ಪ್ರಕರಣ	ವಿವರ	ಪದನಾಮ
17(1)(ಎ)	ಮುನಿಸಿಪಲ್ ಕಾರ್ಪೋರೇಷನ್ನಿನ ಮೇಯರ್ ರವರು ಅಥವಾ ನಗರಪಾಲಿಕೆ ಸಭೆಯ ಅಥವಾ ನಗರದ ಬೇರೆ ನಗರ ಪಾಲಿಕೆ ಸಂಸ್ಥೆಯವರು ಪ್ರಾಧಿಕಾರ ವರ್ಗದ ಅಧಿಕಾರ ಪ್ರಯುಕ್ತ ಸಭಾಪತಿಯಾಗಿರತಕ್ಕದ್ದು.	ಪದನಿಮಿತ್ತ ಅಧ್ಯಕ್ಷರು, ಮಹಾನಗರಪಾಲಿಕೆ, ಮಂಡ್ಯ.	ಅಧ್ಯಕ್ಷರು
17(1)(ಬಿ)	ರಾಜ್ಯ ಸರ್ಕಾರದವರಿಂದ ಅಧಿಕಾರ ಪ್ರಯುಕ್ತ ನೇಮಕ ಮಾಡಲ್ಪಟ್ಟ ನಗರದ ಮೊದಲ ದರ್ಜೆ ಕಾಲೇಜು ಒಂದರ ಪ್ರಾಂಶುಪಾಲರು (ಇವರು ಪ್ರಾಧಿಕಾರ ವರ್ಗದ ಉಪಸಭಾಪತಿಯಾಗಿ ಇರತಕ್ಕದ್ದು)	ಪ್ರಾಂಶುಪಾಲರು, ಸರ್ಕಾರಿ ಮಹಿಳಾ ಕಾಲೇಜು, ಎಂ.ಸಿ.ರಸ್ತೆ, ಮಂಡ್ಯ.	ಸದಸ್ಯರು
17(1)(ಸಿ)	ನಗರದ ನಗರ ಪಾಲಿಕೆ ನಿಗಮದಿಂದ (ಮುನಿಸಿಪಲ್ ಕಾರ್ಪೋರೇಷನ್), ನಗರ ಪಾಲಿಕೆ ಸಭೆಯಿಂದ ಅಥವಾ ಇತರ ನಗರಪಾಲಿಕೆ ಸಂಸ್ಥೆಯಿಂದ ಅದರ ಸದಸ್ಯರುಗಳ ಪೈಕಿಯಿಂದ ಚುನಾಯಿಸಲ್ಪಡುವ ಇಬ್ಬರು ವ್ಯಕ್ತಿಗಳು;	1. ಶ್ರೀ ಎಂ.ಮಹೇಶ್, ನಗರಸಭಾ ಸದಸ್ಯರು, ವಾರ್ಡ್ ನಂ.10, ಮಂಡ್ಯ. 2. ಶ್ರೀ ಸಿ.ಚಂದ್ರಶೇಖರ್, ನಗರಸಭಾ ಸದಸ್ಯರು, ವಾರ್ಡ್ ನಂ.2, ಮಂಡ್ಯ.	ಸದಸ್ಯರು ಸದಸ್ಯರು
17(1)(ಡಿ)	ನಗರ ಸಹಾಯ ಪೋಷಿತ ಪುಸ್ತಕ ಭಂಡಾರಗಳ ಸಂಬಂಧವಾದ ಆಡಳಿತ ಸಂಸ್ಥೆಗಳ ಸದಸ್ಯರುಗಳ ರಾಜ್ಯ ಸರ್ಕಾರದವರಿಂದ ನಾಮನಿರ್ದೇಶನ ಮಾಡಲ್ಪಟ್ಟ ಒಬ್ಬ ವ್ಯಕ್ತಿ;		

	ಪ್ರಕರಣ	ವಿವರ	ಪದನಾಮ
17(1)(ಇ)	ರಾಜ್ಯ ಸರ್ಕಾರದವರಿಂದ ಅಧಿಕಾರ ಪ್ರಯುಕ್ತ ನಾಮನಿರ್ದೇಶನ ಮಾಡಲ್ಪಟ್ಟ ನಗರದಲ್ಲಿನ ಒಂದು ಹೈಸ್ಕೂಲಿನ ಮುಖ್ಯೋಪಾಧ್ಯಾಯರು.	ಮುಖ್ಯೋಪಾಧ್ಯಾಯರು, ಅಭಿನವ ಭಾರತಿ ವಿದ್ಯಾಕೇಂದ್ರ ಪ್ರೌಢಶಾಲೆ, ಡಿ.ಸಿ.ಆಫೀಸ್ ಹಿಂಭಾಗ, ಮಂಡ್ಯ.	ಸದಸ್ಯರು
17(1)(ಎಫ್)	ಮೈಸೂರು ಪುಸ್ತಕ ಭಂಡಾರ ಸಂಘದ ನಗರ ಶಾಖೆ ಯಾವುದಾದರೂ ಇದ್ದರೆ, ಅದರ ಸಮಿತಿಯಿಂದ ನಾಮನಿರ್ದೇಶನ ಮಾಡಲ್ಪಟ್ಟ ಒಬ್ಬ ವ್ಯಕ್ತಿ.		
17(1)(ಜಿ)	ನಗರದಲ್ಲಿ ಅಧಿಕಾರ ವ್ಯಾಪ್ತಿಯ ರಾಜ್ಯ ಸರ್ಕಾರದವರಿಂದ ಅಧಿಕಾರ ಪ್ರಯುಕ್ತ ನಾಮನಿರ್ದೇಶನ ಮಾಡಲ್ಪಟ್ಟ ವಿದ್ಯಾಭ್ಯಾಸ ಇಲಾಖೆಯ ಸಭಾಧಿಕಾರಿ;	ಕ್ಷೇತ್ರ ಶಿಕ್ಷಣಾಧಿಕಾರಿಗಳು, ದಕ್ಷಿಣ ವಲಯ, ಮಂಡ್ಯ.	ಸದಸ್ಯರು
17(1) (ಹೆಚ್)	ಸಾಮಾನ್ಯವಾಗಿ ನಗರದಲ್ಲೇ ವಾಸವಾಗಿರುವ ವ್ಯಕ್ತಿಗಳ ಪೈಕಿ ರಾಜ್ಯ ಸರ್ಕಾರದವರಿಂದ ಮಾಡಲ್ಪಟ್ಟ ಇಬ್ಬರು ವ್ಯಕ್ತಿಗಳು	1. ಶ್ರೀ ತೈಲೂರು ವೆಂಕಟಕೃಷ್ಣ, ನಂ.2958, 4ನೇ ಕ್ರಾಸ್, ನೆಹರು ನಗರ, ಮಂಡ್ಯ. 2. ಶ್ರೀ ರವಿ ಶಂಕರೇಗೌಡ, ಸುಭಾಷ್ ನಗರ, 3ನೇ ಕ್ರಾಸ್, ಮಂಡ್ಯ.	ಸದಸ್ಯರು ಸದಸ್ಯರು
17(2)	ನಗರದ ಮುಖ್ಯ ಪುಸ್ತಕ ಭಂಡಾರಾಧಿಕಾರಿಯು ನಗರದ ಪುಸ್ತಕ ಭಂಡಾರ ಪ್ರಾಧಿಕಾರ ವರ್ಗದ ಮತ್ತು ಸದರಿ ಪ್ರಾಧಿಕಾರ ವರ್ಗದ ಸಮಿತಿಗಳ ಅಧಿಕಾರ ಪ್ರಯುಕ್ತ ಕಾರ್ಯದರ್ಶಿಯಾಗಿರ ತಕ್ಕದ್ದು.	ಮುಖ್ಯ ಗ್ರಂಥಾಲಯಾಧಿಕಾರಿ, ನಗರ ಕೇಂದ್ರ ಗ್ರಂಥಾಲಯ, ಮಂಡ್ಯ.	ಕಾರ್ಯದರ್ಶಿ

PR-64
SC-100

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ವಿ.ರಾಮಕೃಷ್ಣಯ್ಯ,
ಸರ್ಕಾರದ ಅಧೀನ ಕಾರ್ಯದರ್ಶಿ(ಸಾಮಾನ್ಯ)(ಪ್ರ),
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ:ಸಇ 450 ಎಂಆರ್ಇ 2015, ಬೆಂಗಳೂರು, ದಿನಾಂಕ: 08–01–2016.

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 10(1)(ii) ರಡಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಶ್ರೀ ಬಸವರಾಜಪ್ಪಗೌಡ ಬಿನ್ ಸಿದ್ದರಾಮಪ್ಪ, ಸಾ॥ ಮಿಯ್ಯಾಪುರ, ಪೋ॥ ಮಸರಕಲ್, ತಾ॥ ದೇವದುರ್ಗ, ಜಿ॥ ರಾಯಚೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ **ದೇವದುರ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ** ವರ್ತಕರ ಕ್ಷೇತ್ರದಿಂದ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಿದೆ.

PR-65
SC-30

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಲ್.ಸಿ.ಬಸವರಾಜು,
ಸರ್ಕಾರದ ಅಧೀನ ಕಾರ್ಯದರ್ಶಿ–1,
ಸಹಕಾರ ಇಲಾಖೆ.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ಸೇರ್ಪಡೆ ಆದೇಶ

ಸಂಖ್ಯೆ:ಅಪಜೀ 081 ಅಅಸೇ 2014, ಬೆಂಗಳೂರು, ದಿನಾಂಕ: 11–01–2016.

ದಿನಾಂಕ: 19–12–2015 ರ ಅಧಿಸೂಚನೆ ಸಂಖ್ಯೆ: ಅಪಜೀ 081 ಅಅಸೇ 2014ರ ಅನುಬಂಧ–1 ರ ಕ್ರಮ ಸಂಖ್ಯೆ: 459 ರ ನಂತರ ಕೆಳಕಂಡಂತೆ ಸೇರ್ಪಡೆಗೊಳಿಸಿ ಆದೇಶಿಸಿದೆ.

ಕ್ರಸಂ	ಅಭ್ಯರ್ಥಿಯ ಹೆಸರು	ಹುಟ್ಟಿದ ದಿನಾಂಕ	ವರ್ಗ(ಸಾಮಾನ್ಯ /ಹಿಂದುಳಿದ ವರ್ಗ/ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ	ದಿನಗೂಲಿ ಸೇವೆಗೆ ಸೇರಿದ ದಿನಾಂಕ	ದಿನಗೂಲಿ ಸೇವೆಗೆ ಸೇರುವ ವೇಳೆ ಅಭ್ಯರ್ಥಿಯ ವಿದ್ಯಾರ್ಹತೆ ಮತ್ತು ಪಡೆದ ದಿನಾಂಕ	ಪ್ರಸ್ತುತ ವಿದ್ಯಾರ್ಹತೆ ಹಾಗೂ ಪಡೆದ ದಿನಾಂಕ	ದಿನಗೂಲಿ ಸೇವೆಗೆ ನೇಮಕಗೊಂಡ ಹುದ್ದೆ ಹಾಗೂ ವೃಂದ (ಸದರಿ ಹುದ್ದೆಗೆ ನೇಮಕಾತಿ ನಿಯಮದನ್ವಯ ನಿಗಧಿಪಡಿಸಿದ ವಿದ್ಯಾರ್ಹತೆ)	ಪ್ರಸ್ತುತ ನಿರ್ವಹಿಸುತ್ತಿರುವ ಹುದ್ದೆ ಹಾಗೂ ವೃಂದ	ದಿನಗೂಲಿ ಸೇವೆಗೆ ತೆಗೆದುಕೊಳ್ಳಲು ಹೊರಡಿಸಿದ ಆದೇಶ	ಒಟ್ಟು ದಿನಗೂಲಿ ಸೇವೆ (ಸೇವಾ ವಿಭಿನ್ನತೆ ವಿವರದೊಂದಿಗೆ	ಪ್ರಸ್ತುತ ದಿನಗೂಲಿ ಸೇವೆಯಲ್ಲಿರುವ ಬಗ್ಗೆ ಷರಾ (ವೇತನ ಇತರೆ)
1	2	3	4	5	6	7	8	9	10	11	12
				ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾವಿ ವಿಭಾಗ/ಗೋಕಾಕ ವಿಭಾಗ/ಬಾಗಲಕೋಟೆ ವಿಭಾಗ, ಬೆಳಗಾವಿ ವೃತ್ತ							
460	ಎಸ್.ಆರ್.ಹಿರೇಮಠ	30.08.1967	ಸಾಮಾನ್ಯ	01.04.1989	7ನೇ ತರಗತಿ	ಎಸ್.ಎಸ್.ಎಲ್.ಸಿ	ಅರಣ್ಯ ವೀಕ್ಷಕ	ಅರಣ್ಯ ವೀಕ್ಷಕ	ಇಲ್ಲ	25 ವರ್ಷ	ಸೇವೆಯಲ್ಲಿರುತ್ತಾರೆ ಪ್ರತಿ ದಿನಕ್ಕೆ ₹. 266.50/– +2000/–
461	ಎಸ್.ಎಂ.ರಾಚಯ್ಯ ಮಠ	01.01.1961	ಹಿಂದು ಲಿಂಗಾಯತ	01.08.1985	ಎಸ್.ಎಸ್.ಎಲ್.ಸಿ ಪೇಲ್	ಎಸ್.ಎಸ್.ಎಲ್.ಸಿ ಪೇಲ್	ನೆಡುತೋಪು ಕಾವಲುಗಾರ	ನೆಡುತೋಪು ಕಾವಲುಗಾರ	ಇಲ್ಲ	28 ವರ್ಷ	ಸೇವೆಯಲ್ಲಿರುತ್ತಾರೆ ಪ್ರತಿ ದಿನಕ್ಕೆ ₹. 226.50/–
462	ಎಂ.ಆರ್. ತಳವಾರ	20.06.1968	ಎಸ್.ಟಿ.	01.07.1985	7ನೇ ತರಗತಿ	7ನೇ ತರಗತಿ	ಕಾವಲುಗಾರ	ಕಾವಲುಗಾರ	ಇಲ್ಲ		1/8/2012 ರಿಂದ 30.04.2014 ರವರೆಗೆ ಗೈರು ಹಾಜರಾಗಿರುವ ಅವಧಿ

ಸೂಚನೆ: ಈ ಸೇರ್ಪಡೆ ಅಧಿಸೂಚನೆಯಲ್ಲಿರುವ ಹೆಸರು ಮತ್ತು ವಿವರಗಳನ್ನು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.

1. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯಪಡೆ ಮುಖ್ಯಸ್ಥರು) ಇವರು ನೀಡಿದ ಮಾಹಿತಿಯಂತೆ ಆದರಿಸಿದೆ.
2. ದಿನಗೂಲಿ ನೌಕರರು ಸೇವೆಗೆ ಸೇರುವಾಗ ಮತ್ತು ಈಗ ನೀಡಿರುವ ಮಾಹಿತಿಯು ಸುಳ್ಳು/ನಕಲಿ/ಪೋರ್ಜರಿಯಾಗಿದ್ದಲ್ಲಿ ಅವರ ಹೆಸರು ಈ ಅಧಿಸೂಚನೆಯಿಂದ ಸ್ವಯಂ ಚಾಲಿತವಾಗಿ ರದ್ದಾಗುತ್ತದೆ.
3. ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012 ರಂತೆ ಅರ್ಹತೆ ಹೊಂದದೆ ಇದ್ದಲ್ಲಿ ಅಂತಹವರ ಹೆಸರು ಈ ಅಧಿಸೂಚನೆಯಿಂದ ಸ್ವಯಂ ಚಾಲಿತವಾಗಿ ರದ್ದಾಗುತ್ತದೆ. ಈ ಬಗ್ಗೆ ಸರ್ಕಾರವು ಹಕ್ಕನ್ನು ಕಾಯ್ದಿರಿಸಿಕೊಂಡಿದೆ.
4. ಯಾವ ದಿನಗೂಲಿ ನೌಕರನು ಸೇವೆಗೆ ಸೇರಿದ ದಿನಾಂಕದಂದು 18 ವರ್ಷಗಳ ವಯಿಸ್ಸು ಪೂರ್ಣಗೊಂಡಿರುವುದಿಲ್ಲವೋ ಅಂತಹ ದಿನಗೂಲಿ ನೌಕರನು 18 ವರ್ಷಗಳು ಪೂರ್ಣಗೊಂಡ ನಂತರದ ದಿನವನ್ನು ಸೇವೆಗೆ ಸೇರಿದ ದಿನವೆಂದು ಪರಿಗಣಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಹೆಚ್.ಸಿ. ರಾಜೇಂದ್ರ ಕುಮಾರ್,

ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು),

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

PR-60
SC-50

ಪ್ರವಾಸೋದ್ಯಮ ಸಚಿವಾಲಯ

ಅಧಿಸೂಚನೆ


ಸಂಖ್ಯೆ: ಪ್ರಇ 83 ಪ್ರವಾನಿ 2015, ಬೆಂಗಳೂರು, ದಿನಾಂಕ: 30–10–2015.

ಮಾಹಿತಿ ಹಕ್ಕು ಅಧಿನಿಯಮ 2005 ರ ಸೆಕ್ಷನ್ 4(1)(ಬಿ) ಮೇರೆಗೆ ಪ್ರವಾಸೋದ್ಯಮ ಸಚಿವಾಲಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ಡಿಸೆಂಬರ್–2014 ಕ್ಕೆ ಅಂತ್ಯಕ್ಕೆ ಈ ಅಧಿಸೂಚನೆಗೆ ಲಗತ್ತಿಸಿರುವ ಅನುಬಂಧದಲ್ಲಿರುವಂತೆ ಸಾರ್ವಜನಿಕರ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಮೋಹನ್ ಕೆ.
ಸರ್ಕಾರದ ಅಧೀನ ಕಾರ್ಯದರ್ಶಿ,
ಪ್ರವಾಸೋದ್ಯಮ ಇಲಾಖೆ.


ಅಧಿಸೂಚನೆ ಸಂಖ್ಯೆ: ಪ್ರಇ 83 ಪ್ರವಾನಿ 2015, ದಿನಾಂಕ:01.09.2015ಕ್ಕೆ ಅನುಬಂಧ

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ



ಅಧಿಸೂಚನೆ ಸಂಖ್ಯೆ ಪ್ರಇ 83 ಪ್ರವಾನಿ 2015, ದಿನಾಂಕ: 01.09.2015

4(1)(ಬಿ) (I):- ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತಶಾಖೆಯ ರಚನೆ



<u>ಆಪ್ತ ಶಾಖೆಯ ಕಾರ್ಯಗಳು ಮತ್ತು ಕರ್ತವ್ಯಗಳು:</u>

ಪ್ರವಾಸೋದ್ಯಮ ಇಲಾಖೆ ಕರ್ನಾಟಕ ಸರ್ಕಾರ ಸಚಿವಾಲಯದ ಒಂದು ಭಾಗವಾಗಿದ್ದು, ವಿಕಾಸಸೌಧ, ಕಟ್ಟಡದ ನೆಲಮಹಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಮಾನ್ಯ ಪ್ರವಾಸೋದ್ಯಮ ಸಚಿವರು ಪ್ರವಾಸೋದ್ಯಮ ಇಲಾಖೆಗೆ ಸಂಬಂಧಪಟ್ಟ ಸಚಿವರಾಗಿರುತ್ತಾರೆ. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರಾಗಿರುತ್ತಾರೆ. ಈ ಇಲಾಖೆಯಲ್ಲಿ ಒಬ್ಬರು ಜಂಟಿ ಕಾರ್ಯದರ್ಶಿ, ಒಬ್ಬ ಅಧೀನ ಕಾರ್ಯದರ್ಶಿ, ಒಬ್ಬ ಶಾಖಾಧಿಕಾರಿ ಮತ್ತು ಸಿ ಹಾಗೂ ಡಿ ವರ್ಗದ ನೌಕರರುಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಈ ಇಲಾಖೆಯ ರಚನೆಯನ್ನು ಅನುಬಂಧ-1 ರಲ್ಲಿನ ಪಟ್ಟಿ (Organization chart) ಯಲ್ಲಿ ನಮೂದಿಸಲಾಗಿದೆ.

<u>ಪ್ರವಾಸೋದ್ಯಮ ಇಲಾಖೆಯ ಮುಖ್ಯ ಧ್ಯೇಯೋದ್ದೇಶಗಳು ಈ ಕೆಳಕಂಡಂತಿವೆ:-</u>

1) ಕರ್ನಾಟಕವನ್ನು ರಾಷ್ಟ್ರೀಯ ಮತ್ತು ಅಂತರರಾಷ್ಟ್ರಿಯ ಮಟ್ಟದಲ್ಲಿ ಅತ್ಯುತ್ತಮ ಪ್ರವಾಸಿ ತಾಣವನ್ನಾಗಿ ರೂಪಿಸುವುದು.

2) ದೇಶಿ ಮತ್ತು ವಿದೇಶಿ ಪ್ರವಾಸಿಗರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಕರ್ಷಿಸಲು ರಾಜ್ಯದಲ್ಲಿ ಸಮರ್ಥ, ಆಕರ್ಷಕ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸುವುದು.

3) ಕರ್ನಾಟಕದ ಪ್ರವಾಸೋದ್ಯಮವನ್ನು ಭಾರತದ ಅದ್ವೀತಿಯ ಪ್ರವಾಸಿ ತಾಣವನ್ನಾಗಿಸುವ ಮೂಲಕ ಒಂದು ಉದ್ಯೋಗದಾತ, ಆದಾಯದಾತ ಮತ್ತು ಅಭಿವೃದ್ಧಿಯಂತ್ರವಾಗುವಂತೆ ಒಂದು ಪ್ರಮುಖ ಮತ್ತು ಬೃಹತ್ ಆರ್ಥಿಕ ಚಟುವಟಿಕೆಯಾಗಿ ರೂಪಿಸುವುದು.

ಕರ್ನಾಟಕ ಸರ್ಕಾರ ಸಚಿವಾಲಯದ ಪ್ರವಾಸೋದ್ಯಮ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ವೃಂದ ಬಲವು ಈ ಕೆಳಕಂಡಂತಿದೆ.

1	ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ	ಒಂದು
2	ಸರ್ಕಾರದ ಜಂಟಿ ಕಾರ್ಯದರ್ಶಿ	ಒಂದು
3	ಸರ್ಕಾರದ ಅಧೀನ ಕಾರ್ಯದರ್ಶಿಗಳು	ಒಂದು
4	ಶಾಖಾಧಿಕಾರಿಗಳು	ಒಂದು

ಪ್ರವಾಸೋದ್ಯಮ ಇಲಾಖೆ ಸಚಿವಾಲಯ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಕ್ಷೇತ್ರ ಇಲಾಖೆಗಳಿಗೆ/ಸಂಸ್ಥೆಗಳಿಗೆ ಸಂಬಂಧಿಸಿದಂತೆ ಆಡಳಿತಾತ್ಮಕ, ಆರ್ಥಿಕ ಹಾಗೂ ಸೇವಾ ವಿಷಯಗಳನ್ನು ನಿರ್ವಹಿಸಲಾಗುತ್ತಿದೆ.

1	ಪ್ರವಾಸೋದ್ಯಮ ಇಲಾಖೆ
2	ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ
3	ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ.
4	ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆಯ ಅಧಿಕೃತ ಮುಖ್ಯಸ್ಥರಾಗಿದ್ದು, ಇಲಾಖಾ ಸಚಿವರ ಸಾಮಾನ್ಯ ಮತ್ತು ವಿಶೇಷ ನಿರ್ದೇಶನಗಳನ್ನು ನಿಯಮಗಳ ಚೌಕಟ್ಟಿನಲ್ಲಿ ಹಾಗೂ ಕರ್ನಾಟಕ ಸರ್ಕಾರಿ (ಕಾರ್ಯನಿರ್ವಹಣೆ) 1977 ನಿಯಮಗಳಿಗೆ ಒಳಪಟ್ಟು ಆಡಳಿತಾತ್ಮಕ ವಿಷಯಗಳಿಗೆ ಸಂಬಂಧಿಸಿದಂತೆ ಅಂತಿಮ ಜವಾಬ್ದಾರಿ ಹೊಂದಿರುತ್ತಾರೆ. ಅಪರ ಮುಖ್ಯ ಕಾರ್ಯದರ್ಶಿಯವರ ಹುದ್ದೆಗೆ ಪೂರಕ ಸಿಬ್ಬಂದಿ ಆಪ್ತ ಶಾಖೆಯಲ್ಲಿ ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸುತ್ತಾರೆ:-

1. ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಶಾಖೆಯಲ್ಲಿ ಸ್ವೀಕರಿಸಲಾಗುವ ಪತ್ರಗಳು ಹಾಗೂ ಕಡತಗಳ ನಿರ್ವಹಣೆ
2. ಇತರೆ ಇಲಾಖೆಗಳಿಂದ ಮತ್ತು ಕ್ಷೇತ್ರ ಇಲಾಖೆಯಿಂದ ಸ್ವೀಕೃತವಾಗುವ ಪ್ರಸ್ತಾವನೆ/ ಪತ್ರಗಳನ್ನು ಅಪರ ಮುಖ್ಯ ಕಾರ್ಯದರ್ಶಿಯವರ ಅವಗಾಹನೆಯ ನಂತರ ಸಂಬಂಧಪಟ್ಟ ಕಾರ್ಯನಿರತ ಶಾಖೆಗಳಿಗೆ ರವಾನಿಸುವುದು.
3. ಅಪರ ಮುಖ್ಯ ಕಾರ್ಯದರ್ಶಿಯವರು ನೀಡುವ ಉಕ್ತಲೇಖನವನ್ನು ತೆಗೆದುಕೊಂಡು ಅದನ್ನು ಬೆರಳಚ್ಚಿಸಿ ಶುದ್ಧ ಪ್ರತಿಯನ್ನು ಕ್ಷಿಪ್ರವಾಗಿ ನೀಡುವುದು.
4. ಅಪರ ಮುಖ್ಯ ಕಾರ್ಯದರ್ಶಿಯವರ ಕಾರ್ಯಕಲಾಪ, ಸಭೆ/ಭೇಟಿ ಮುಂತಾದವುಗಳ ಬಗ್ಗೆ ಮಾಹಿತಿ ನಿರ್ವಹಣೆ ಹಾಗೂ ಸಚಿವಾಲಯ ಕೈಪಿಡಿಯಲ್ಲಿ ನಮೂದಿಸಿರುವಂತೆ ಆಪ್ತ ಶಾಖೆಗೆ ವಹಿಸಿರುವ ಇತರೆ ಕಾರ್ಯಗಳು
5. ಅಪರ ಮುಖ್ಯ ಕಾರ್ಯದರ್ಶಿಯವರ ವೈಯಕ್ತಿಕ ಕಡತ/ಪತ್ರಗಳ ನಿರ್ವಹಣೆ
6. ಅಧಿಕಾರಿಯವರಿಗೆ ಸಂಬಂಧಪಟ್ಟಂತೆ ಬಿಲ್‌ಗಳನ್ನು ತಯಾರಿಸಿ ನಿರ್ವಹಿಸುವುದು
7. ದೂರವಾಣಿ ಕರೆಗಳ ನಿರ್ವಹಣೆ/ಫ್ಯಾಕ್ಸ್ ನಿರ್ವಹಣೆ
8. ಅಪರ ಮುಖ್ಯ ಕಾರ್ಯದರ್ಶಿಯವರ ಸಭೆ/ಪರಿಶೀಲನೆ/ಪ್ರವಾಸ/ಪರಿವೀಕ್ಷಣೆ ಇತ್ಯಾದಿ ಸಮನ್ವಯ ಕಾರ್ಯಗಳು

4(1)(ಬಿ)(II): ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯಾಲಯದ ಅಧಿಕಾರಿ ಮತ್ತು ನೌಕರರುಗಳ ಹೊಣೆಗಾರಿಕೆ ಮತ್ತು ಕರ್ತವ್ಯಗಳು

1. ಜಮೇದಾರ್/ದಲಾಯತ್: ಕಛೇರಿಯನ್ನು ಅಚ್ಚುಕಟ್ಟಾಗಿ ಚೊಕ್ಕಟವಾಗಿಡುವುದು. ಅಪರ ಮುಖ್ಯ ಕಾರ್ಯದರ್ಶಿಯವರ ಕರೆ ಗಂಟೆಗೆ ಓಗೊಡುವುದು. ಇತರೆ ಶಾಖೆಗಳಿಗೆ/ಇಲಾಖೆಗಳಿಗೆ ಕಡತಗಳನ್ನು ಹಾಗೂ ಟಪಾಲುಗಳನ್ನು ಖುದ್ದಾಗಿ ತಲುಪಿಸುವುದು. ಕಛೇರಿಯ ಮೇಲಧಿಕಾರಿಗಳು ಸೂಚಿಸುವ ಕೆಲಸಗಳು ಹಾಗೂ ಸಚಿವಾಲಯದ ಕೈಪಿಡಿಯಲ್ಲಿ ಈ ಹುದ್ದೆಗೆ ಸೂಚಿಸಿರುವಂತೆ ಇನ್ನಿತರೆ ಕೆಲಸಗಳ ಜೊತೆಗೆ ಜೆರಾಕ್ಸ್ ಯಂತ್ರದ ನಿರ್ವಹಣೆ.

2. ಕಿರಿಯ ಸಹಾಯಕರು: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ವಿಳಾಸಿಸಿರುವ ಪತ್ರಗಳನ್ನು/ಕಡತಗಳನ್ನು ಸ್ವೀಕರಿಸಿದ ಕೂಡಲೇ ಸಹಾಯಕರ ವಹಿಯಲ್ಲಿ ನೊಂದಾಯಿಸುವುದು. ನಂತರ ಸಂಬಂಧಿಸಿದ ಶಾಖೆಗಳಿಗೆ/ಅಧಿಕಾರಿಗಳಿಗೆ ರವಾನಿಸುವುದು. ನಿಗದಿತ ತ:ಖ್ತೆಗಳ, ನಿಯತಕಾಲಿಕ ಸವಿವರಣೆಗಳ ತಯಾರಿಕೆ, ಅಧೀನ ಅಧಿಕಾರಿಗಳಿಂದ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಬರುವ ಕಡತ ಮತ್ತು ಪತ್ರಗಳನ್ನು ಗಣಕಯಂತ್ರದಲ್ಲಿನ ಚಲನವಲನ ಮಾಹಿತಿ ಮುಖಾಂತರ ಸ್ವೀಕರಿಸಿ, ಚಲನವಲನ ನಿರ್ವಹಣೆ, ಮೇಲಧಿಕಾರಿಗಳು ಸೂಚಿಸುವ ಇನ್ನಿತರೆ ಕೆಲಸಗಳು ಹಾಗೂ ಸಚಿವಾಲಯದ ಕೈಪಿಡಿಯಲ್ಲಿ ಈ ಹುದ್ದೆಗೆ ಸೂಚಿಸಿರುವಂತೆ ಇನ್ನಿತರೆ ಕೆಲಸಗಳು

3. ವಾಹನ ಚಾಲಕರು: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಕಛೇರಿ ಉಪಯೋಗಕ್ಕಿರುವ ಸರ್ಕಾರದ ಅಧಿಕೃತ ವಾಹನಗಳನ್ನು ನಿರ್ವಹಿಸುವುದು ಹಾಗೂ ಅಗತ್ಯತೆಗೆ ಅನುಗುಣವಾಗಿ ವಾಹನಗಳನ್ನು ಓಡಿಸುವುದು. ವಾಹನದ ಲಾಗ್ ಪುಸ್ತಕ ನಿರ್ವಹಣೆ ಹಾಗೂ ವಾಹನವನ್ನು ಸುಸ್ಥಿತಿಯಲ್ಲಿಡುವುದು. ಸಚಿವಾಲಯದ ಕೈಪಿಡಿಯಲ್ಲಿ ಈ ಹುದ್ದೆಗೆ ಸೂಚಿಸಿರುವಂತೆ ಇನ್ನಿತರೆ ಕೆಲಸಗಳು.

4. ಶೀಘ್ರಲಿಪಿಗಾರರು: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆದೇಶದ ಮೇರೆಗೆ ಉಕ್ತಲೇಖನಗಳನ್ನು ತೆಗೆದುಕೊಂಡು ಅವುಗಳನ್ನು ಶೀಘ್ರವಾಗಿ ಗಣಕಯಂತ್ರದಲ್ಲಿ ಬೆರಳಚ್ಚಿಸಿ ಸಲ್ಲಿಸುವುದು. ದೂರವಾಣಿ ಕರೆಗಳನ್ನು ಸ್ವೀಕರಿಸಿ ಸಂಪರ್ಕ ಕಲ್ಪಿಸುವುದು. ಸಂದರ್ಶಕರು ಬಂದಾಗ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಭೇಟಿಗೆ ಏರ್ಪಾಡು ಮಾಡುವುದು. ಅಧಿಕಾರಿಗಳ ಕಾರ್ಯಕಲಾಪ, ಸಭೆ ಮುಂತಾದವುಗಳ ಬಗ್ಗೆ ನಿಖರವಾದ ಮಾಹಿತಿಗಳನ್ನು ಪಟ್ಟಿಮಾಡಿ ಅವುಗಳಿಗೆ ಸಂಬಂಧಿಸಿದ ಟಿಪ್ಪಣಿಗಳನ್ನು ತಯಾರಿಸಲು ಆಪ್ತ ಸಹಾಯಕರು ಹಾಗೂ ಪತ್ರಾಂಕಿತ ಆಪ್ತ ಸಹಾಯಕರಿಗೆ ಸಹಕರಿಸುವುದು ಹಾಗೂ ಅವುಗಳನ್ನು ಅನುಸರಿಸುವಂತೆ ಸಕಾಲದಲ್ಲಿ ಅಧಿಕಾರಿಗಳಿಗೆ ನೆನಪು ಮಾಡುವುದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಂದ ಸೂಚಿಸಲ್ಪಟ್ಟ ಇತರೆ ಕಛೇರಿ ಕೆಲಸಗಳು ಹಾಗೂ ಸಚಿವಾಲಯದ ಕೈಪಿಡಿಯಲ್ಲಿ ಈ ಹುದ್ದೆಗೆ ಸೂಚಿಸಿರುವಂತೆ ಇನ್ನಿತರೆ ಕೆಲಸಗಳು.

5. <u>ಪತ್ರಾಂಕಿತ ಆಪ್ತ ಸಹಾಯಕರು:</u> ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆದೇಶದ ಮೇರೆಗೆ ಉಕ್ತಲೇಖನಗಳನ್ನು ತೆಗೆದುಕೊಂಡು ಅದನ್ನು ಶೀಘ್ರವಾಗಿ ಗಣಕಯಂತ್ರದಲ್ಲಿ ಬೆರಳಚ್ಚಿಸಿ ಸಲ್ಲಿಸುವುದು. ದೂರವಾಣಿ ಕರೆಗಳನ್ನು ಸ್ವೀಕರಿಸಿ ಸಂಪರ್ಕ ಕಲ್ಪಿಸುವುದು. ಸಂದರ್ಶಕರು ಬಂದಾಗ ಕಾರ್ಯದರ್ಶಿಯವರ ಭೇಟಿಗೆ ಏರ್ಪಾಡು ಮಾಡುವುದು. ಅಧಿಕಾರಿಗಳ ಕಾರ್ಯಕಲಾಪ, ಸಭೆ ಮುಂತಾದವುಗಳ ಬಗ್ಗೆ ನಿಖರವಾದ ಮಾಹಿತಿಗಳನ್ನು ಪಟ್ಟಿಮಾಡಿ ಅವುಗಳಿಗೆ ಸಂಬಂಧಿಸಿದ ಟಿಪ್ಪಣಿಗಳನ್ನು ತಯಾರಿಸುವುದು ಹಾಗೂ ಅವುಗಳನ್ನು ಅನುಸರಿಸುವಂತೆ ಸಕಾಲದಲ್ಲಿ ಅಧಿಕಾರಿಗಳಿಗೆ ನೆನಪು ಮಾಡುವುದು ಕಾರ್ಯದರ್ಶಿಯವರಿಂದ ಸೂಚಿಸಲ್ಪಟ್ಟ ಇತರೆ ಕಛೇರಿ ಕೆಲಸಗಳು. ಕಾರ್ಯದರ್ಶಿಯವರ ಹೆಸರಿನಲ್ಲಿ ಸ್ವೀಕೃತವಾದ ಟಪಾಲುಗಳು ಹಾಗೂ ಕಡತದಲ್ಲಿ ನಿರ್ದೇಶಿಸಲ್ಪಟ್ಟಿರುವ ವಿಷಯಗಳನ್ನು ಕಾರ್ಯರೂಪಕ್ಕೆ ತರುವುದು ಹಾಗೂ ಅಧೀನ ಅಧಿಕಾರಿಗಳಿಂದ ಸ್ವೀಕೃತವಾಗುವ ಕಡತಗಳನ್ನು ಕಾರ್ಯದರ್ಶಿಯವರ ಅನುಮೋದನೆಗಾಗಿ ಸಲ್ಲಿಸುವುದು. ಅಪರ ಮುಖ್ಯ ಕಾರ್ಯದರ್ಶಿಯವರ ಪ್ರವಾಸ ಕಾರ್ಯಕ್ರಮಗಳನ್ನು ಏರ್ಪಡಿಸುವುದು. ಅದಕ್ಕೆ ಸಂಬಂಧಿಸಿದ ವಿಮಾನ/ರೈಲು ಪ್ರಯಾಣದ ಟಿಕೆಟ್‌ಗಳನ್ನು ಕಾಯ್ದಿರಿಸಿ ಸಕಾಲದಲ್ಲಿ ಒದಗಿಸುವುದು ಹಾಗೂ ಪ್ರಯಾಣ ಭತ್ಯೆಯ ಬಿಲ್‌ಗಳನ್ನು ತಯಾರಿಸುವುದು. ಕಛೇರಿ ಲೇಖನ ಸಾಮಗ್ರಿ ಬಿಲ್, ರಿಫ್ರೆಶ್‌ಮೆಂಟ್ ಬಿಲ್, ವಾಹನದ ಇಂಧನ ಬಿಲ್, ಇತ್ಯಾದಿ ಬಿಲ್‌ಗಳನ್ನು ತಯಾರಿಸಿ ಮಂಜೂರಾತಿಗಾಗಿ ಸಂಬಂಧಿಸಿದ ಇಲಾಖೆಯ ಲೆಕ್ಕಪತ್ರ ವಿಭಾಗಕ್ಕೆ ಕಳುಹಿಸುವುದು. ಸಚಿವಾಲಯದ ಕೈಪಿಡಿಯಲ್ಲಿ ಈ ಹುದ್ದೆಗೆ ಸೂಚಿಸಿರುವಂತೆ ಇನ್ನಿತರೆ ಕೆಲಸಗಳು.

6. <u>ಆಪ್ತ ಕಾಯದರ್ಶಿ (ಗ್ರೇಡ್-2):</u> ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಪ್ತ ಶಾಖೆಯ ಒಟ್ಟಾರೆ ಮೇಲುಸ್ತುವಾರಿ ಮಾಡುವುದು, ಸಂದರ್ಭನುಸಾರ ಅವರು ನೀಡುವ ಉಕ್ತಲೇಖನವನ್ನು ತೆಗೆದುಕೊಂಡು ಅದನ್ನು ಶೀಘ್ರವಾಗಿ ಗಣಕಯಂತ್ರದಲ್ಲಿ ಬೆರಳಚ್ಚಿಸಿ ಸಲ್ಲಿಸುವುದು. ದೂರವಾಣಿ ಕರೆಗಳನ್ನು ಸ್ವೀಕರಿಸಿ ಸಂಪರ್ಕ ಕಲ್ಪಿಸುವುದು. ಸಂದರ್ಶಕರು ಬಂದಾಗ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಭೇಟಿಗೆ ಏರ್ಪಾಡು ಮಾಡುವುದು. ಅಧಿಕಾರಿಗಳ ಕಾರ್ಯಕಲಾಪ, ಸಭೆ ಮುಂತಾದವುಗಳ ಬಗ್ಗೆ ನಿಖರವಾದ ಮಾಹಿತಿಗಳನ್ನು ಪಟ್ಟಿಮಾಡಿ ಅವುಗಳಿಗೆ ಸಂಬಂಧಿಸಿದ ಟಿಪ್ಪಣಿಗಳನ್ನು ತಯಾರಿಸಿಡುವುದು ಹಾಗೂ ಅವುಗಳನ್ನು ಅನುಸರಿಸುವಂತೆ ಸಕಾಲದಲ್ಲಿ ಅಧಿಕಾರಿಗಳಿಗೆ ನೆನಪು ಮಾಡುವುದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಂದ ಸೂಚಿಸಲ್ಪಟ್ಟ ಇತರೆ ಕಛೇರಿ ಕೆಲಸಗಳು. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹೆಸರಿನಲ್ಲಿ ಸ್ವೀಕೃತವಾದ ಟಪಾಲುಗಳು ಹಾಗೂ ಕಡತದಲ್ಲಿ ನಿರ್ದೇಶಿಸಲ್ಪಟ್ಟಿರುವ ವಿಷಯಗಳನ್ನು ಕಾರ್ಯರೂಪಕ್ಕೆ ತರುವುದು ಹಾಗೂ ಅವುಗಳನ್ನು ಅನುಸರಿಸುವಂತೆ ಸಕಾಲದಲ್ಲಿ ಅಧಿಕಾರಿಗಳಿಗೆ ನೆನಪು ಮಾಡುವುದು. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಂದ ಸೂಚಿಸಲ್ಪಟ್ಟ ಇತರೆ ಕಛೇರಿ ಕೆಲಸಗಳು ಹಾಗೂ ಈ ಕೆಲಸಗಳ ನಿರ್ವಹಣೆಯಲ್ಲಿ ಶೀಘ್ರಲಿಪಿಗಾರರಿಗೆ ಮತ್ತು ಆಪ್ತಸಹಾಯಕರಿಗೆ ಮಾರ್ಗದರ್ಶನ ನೀಡುವುದು.

<u>4(1)(ಬಿ)(III): ಮೇಲ್ವಿಚಾರಣೆ ಮತ್ತು ಜವಾಬ್ದಾರಿಗಳನ್ನು ಒಳಗೊಂಡಂತೆ, ತೀರ್ಮಾನ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸುವ ಕಾರ್ಯವಿಧಾನ:</u>

1) ಪತ್ರಾಂಕಿತ ಆಪ್ತ ಸಹಾಯಕರು: ಅಪರ ಮುಖ್ಯ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರಾಗಿ ಅವರ ಸಲಹೆ ಹಾಗೂ ಸೂಚನೆಯ ಮೇರಗೆ ಅಪ್ತ ಶಾಖೆಯ ಕಛೇರಿ ಕಾರ್ಯಗಳ ಜೊತೆಗೆ ಆಪ್ತ ಶಾಖೆಯ ಮೇಲ್ವಿಚಾರಣೆಯನ್ನು ನಿರ್ವಹಿಸುವುದು.

2) ಶೀಘ್ರಲಿಪಿಗಾರರು: ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಸಹಾಯಕರಾಗಿ ಅವರ ಸಲಹೆ ಹಾಗೂ ಸೂಚನೆಯ ಮೇರೆಗೆ ಬೆರಳಚ್ಚು, ಕಾರ್ಯಕ್ರಮ ಪಟ್ಟಿ ಹಾಗೂ ದಿನಚರಿ ಒಳಗೊಂಡಂತೆ ಆಪ್ತ ಶಾಖೆಯ ಕಛೇರಿ ಕಾರ್ಯಗಳನ್ನು ನಿರ್ವಹಿಸುವುದು.

3) ಕಿರಿಯ ಸಹಾಯಕರು: ಕರ್ನಾಟಕ ಸರ್ಕಾರ ಸಚಿವಾಲಯ ಕೈಪಿಡಿಯಲ್ಲಿ ಸೂಚಿಸಿರುವಂತೆ ಸರ್ಕಾರದ ಕಾರ್ಯದರ್ಶಿಯವರಿಗೆ ಬರುವ ಎಲ್ಲಾ ಕಡತಗಳ ಮತ್ತು ಪತ್ರಗಳ ನಿರ್ವಹಣೆ ಹಾಗೂ ಚಲನವಲನ ನಮೂದನ್ನು ಕಂಪ್ಯೂಟರ್‌ನಲ್ಲಿ ಅಳವಡಿಸಿಕೊಂಡು ನೊಂದಾಯಿಸಿ ಅವುಗಳ ರವಾನೆ ಕೆಲಸಗಳನ್ನು ಅಂದಂದೇ ನಿರ್ವಹಿಸುವುದು.

4) ಜಮೇದಾರ್/ದಲಾಯತ್: ಕಛೇರಿಯ ಸಮಯಕ್ಕೆ ಮುಂಚೆಯೇ ಹಾಜರಾಗಿ ಕಛೇರಿಯನ್ನು ಸ್ವಚ್ಚವಾಗಿಡುವುದು. ಕಡತ/ಟಪಾಲುಗಳನ್ನು ಮುಖ್ಯ ಮಂತ್ರಿಯವರ ಕಛೇರಿ/ಮುಖ್ಯಕಾರ್ಯದರ್ಶಿಯವರ ಕಛೇರಿ/ಇಲಾಖಾ ಸಚಿವರ ಕಛೇರಿ/ಇತರೆ ಇಲಾಖೆಗಳ ಕಾರ್ಯದರ್ಶಿಗಳ ಕಛೇರಿ ಹಾಗೂ ಸಂಬಂಧಪಟ್ಟ ಶಾಖೆಗಳಿಗೆ ಕೂಡಲೇ ಅಂದಂದೇ ತಲುಪಿಸುವುದು.

<u>4(1)(ಬಿ)(IV): ಕಾರ್ಯಗಳ ನಿರ್ವಹಣೆಗೆ ರೂಪಿಸಿರುವ ಸೂತ್ರಗಳು:</u>

2005ರ ಕರ್ನಾಟಕ ಸರ್ಕಾರ ಸಚಿವಾಲಯದ ಪರಿಷ್ಕೃತ ಕೈಪಿಡಿ ಹಾಗೂ ಕರ್ನಾಟಕ ಸರ್ಕಾರದ (ವ್ಯವಹಾರ ಹಂಚಿಕೆ ನಿಯಮಗಳು 1977) ಹಾಗೂ ಕಾಲಕಾಲಕ್ಕೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಹೊರಡಿಸಲಾಗುವ ಆದೇಶ ಮತ್ತು ಇತರೆ ಸರ್ಕಾರಿ ಆದೇಶಗಳು ಮತ್ತು ಸುತ್ತೋಲೆಗಳು.

<u>4(1)(ಬಿ)(V): ಕಾರ್ಯಗಳನ್ನು ನಿರ್ವಹಿಸುವಲ್ಲಿ ಅಧಿಕಾರಿಗಳು/ಸಿಬ್ಬಂದಿಗಳು ಹೊಂದಿರುವ ಅಧಿನಿಯಮಗಳು, ನಿಯಮಗಳು, ಸೂಚನೆಗಳು, ಕೈಪಿಡಿ ಅಥವಾ ದಾಖಲೆಗಳು:</u>

1) ಸರ್ಕಾರ ಸಚಿವಾಲಯದ ಕಛೇರಿ ಕೈಪಿಡಿ (ಪರಿಷ್ಕೃತ) 2005
2) ಕರ್ನಾಟಕ ಸರ್ಕಾರ (ಕಾರ್ಯನಿರ್ವಹಣೆ) ನಿಯಮಗಳು 1977
3) ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, 1958
4) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977
5) ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966
6) ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಗಳು 1957

7) ಕರ್ನಾಟಕ ಅಧಿಕೃತ ಭಾಷಾ ಅಧಿನಿಯಮ 1963

8) ಮಾಹಿತಿ ಹಕ್ಕು ಅಧಿನಿಯಮ 2005.

ಆರ್ಥಿಕ ವಿಷಯಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿನಿಯಮ/ನಿಯಮಗಳನ್ನು ಉಪಯೋಗಿಸಲಾಗುತ್ತಿದೆ:

1) ಕರ್ನಾಟಕ ಆರ್ಥಿಕ ಸಂಹಿತೆ.

2) ಖಜಾನೆ ಸಂಹಿತೆ.

3) ಸಾದಿಲ್ವಾರು ವೆಚ್ಚದ ಕೈಪಿಡಿ.

4) ಸರ್ಕಾರದ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜನೆಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯು ಆಗಿಂದಾಗ್ಗೆ ಹೊರಡಿಸಿರುವ ಆದೇಶ, ಸುತ್ತೋಲೆಗಳು.

5) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಹೊರಡಿಸಿರುವ ಆದೇಶ/ಸುತ್ತೋಲೆಗಳು.

6) ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು 2000.

4(1)(ಬಿ)(VI): ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ವಿವರ ಪಟ್ಟಿ:

ಸಚಿವಾಲಯ ವಾಹಿನಿಯ ಮೇರೆಗೆ ಸಂಬಂಧಪಟ್ಟ ಶಾಖೆಗಳಲ್ಲಿ ಎಲ್ಲಾ ಕಡತಗಳು ಹಾಗೂ ಹಿಂದೆ ಮುಕ್ತಾಯಗೊಂಡಂತಹ ಪ್ರಮುಖ ಕಡತಗಳು ಲಭ್ಯವಿರುತ್ತವೆ.

ಆಪ್ತಶಾಖೆಯಲ್ಲಿ ಯಾವುದೇ ಕಡತಗಳನ್ನು ಸೃಜಿಸುವುದಿಲ್ಲ. ಗೌಪ್ಯ ಹಾಗೂ ಇತರೆ ಮುಖ್ಯವಾದ ಕಡತಗಳನ್ನು ಮಾತ್ರ ಸೃಜಿಸಲಿದ್ದು, ಅವುಗಳನ್ನು ಮಾತ್ರ ನಿರ್ವಹಿಸಲಾಗುವುದು.

4(1)(ಬಿ)(VII): ಕಾರ್ಯನೀತಿ ರಚನೆ ಅಥವಾ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅವರ ಪ್ರಾತಿನಿಧ್ಯ ಇರುವಂತೆ ಮಾಡಲು ಇರುವಂತಹ ಯಾವುದೇ ವ್ಯವಸ್ಥೆಯ ವಿವರಗಳು:

ಆಪ್ತಶಾಖೆಯಲ್ಲಿ ಈ ತರಹದ ವ್ಯವಸ್ಥೆಯನ್ನು ಮಾಡಿಕೊಂಡಿರುವುದಿಲ್ಲ.

4(1)(ಬಿ)(VIII): ಸರ್ಕಾರದ ಒಂದು ಅಂಗವಾಗಿ ಅಥವಾ ಸಲಹೆಗಳನ್ನು ಪಡೆಯಲು ರಚಿತವಾದ ಎರಡು ಅಥವಾ ಹೆಚ್ಚು ಜನರನ್ನೊಳಗೊಂಡ ಮಂಡಳಿ, ಪರಿಷತ್ತು, ಸಮಿತಿ ಮತ್ತು ಇತರ ವ್ಯವಸ್ಥೆಗಳು ಮತ್ತು ಅಂಥ ಮಂಡಳಿ, ಪರಿಷತ್ತು, ಸಮಿತಿ ಮತ್ತು ಇತರ ವ್ಯವಸ್ಥೆಗಳ ಸಭೆಗಳು ಸಾರ್ವಜನಿಕರ ಪ್ರವೇಶಕ್ಕೆ ಮುಕ್ತ ಆಗಿದೆಯೇ ಅಥವಾ ಈ ಸಭೆಗಳ ನಡವಳಿಗಳು ಸಾರ್ವಜನಿಕರಿಗೆ ದೊರಕುತ್ತಿವೆಯೇ ಎಂಬ ಬಗ್ಗೆ ಒಂದು ವಿವರಣೆ:

ಇದು ಆಪ್ತಶಾಖೆಯಾಗಿರುವುದರಿಂದ ಇಲ್ಲಿ ಮೇಲೆ ಹೇಳಿರುವ ವಿವರಗಳ ಪಟ್ಟಿ ಲಭ್ಯವಿರುವುದಿಲ್ಲ. ಸಾರ್ವಜನಿಕರು ಈ ತರಹದ ಮಾಹಿತಿಗಳನ್ನೇನಾದರೂ ಕೇಳಿದರೆ ಅವರಿಗೆ ಸಂಬಂಧಪಟ್ಟ ಶಾಖೆಗಳನ್ನು ಸಂಪರ್ಕಿಸಲು ತಿಳಿಸಲಾಗುವುದು.

4(1)(ಬಿ)(IX) ಮತ್ತು**(X):** ಪ್ರವಾಸೋದ್ಯಮ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಮತ್ತು ಅವರ ಆಪ್ತಶಾಖೆಯ ಅಧಿಕಾರಿ/ಸಿಬ್ಬಂದಿಗಳ ವಿವರ ಸೂಚಿ ಪುಸ್ತಕ **(directory).**

ಕ್ರಮ ಸಂಖ್ಯೆ	ಹೆಸರು ಮತ್ತು ಹುದ್ದೆ ಶ್ರೀ / ಶ್ರೀಮತಿ	ವಿಳಾಸ	ದೂರವಾಣಿ ಸಂಖ್ಯೆ	ಮಾಸಿಕ ವೇತನ (ರೂ.ಗಳಲ್ಲಿ)
1	ಅರವಿಂದ ಜಾಧವ್, ಭಾ.ಆ.ಸೇ ಅಪರ ಮುಖ್ಯ ಕಾರ್ಯದರ್ಶಿ	-	ಕಛೇರಿ 22255482/22034007	-
2	ಆಪ್ತ ಕಾರ್ಯದರ್ಶಿ (ಗ್ರೇಡ್-2) (ಖಾಲಿ ಇದೆ)	-	-	-
3	ಪತ್ರಾಂಕಿತ ಆಪ್ತ ಸಹಾಯಕರು ಖಾಲಿ ಇದೆ	-	-	-
4	ಶೀಘ್ರಲಿಪಿಗಾರ (ಖಾಲಿ ಇದೆ)	-	ಕಛೇರಿ 22255482/22034007	-
5	ಜೆ.ಎಸ್. ಭೀಮಶಂಕರ ಕಿರಿಯ ಸಹಾಯಕರು	-	ಕಛೇರಿ 22255482/22034007	-
6	ಹಿರಿಯ ವಾಹನ ಚಾಲಕರು	-	-	-

ಕ್ರಮ ಸಂಖ್ಯೆ	ಹೆಸರು ಮತ್ತು ಹುದ್ದೆ ಶ್ರೀ / ಶ್ರೀಮತಿ	ವಿಳಾಸ	ದೂರವಾಣಿ ಸಂಖ್ಯೆ	ಮಾಸಿಕ ವೇತನ (ರೂ.ಗಳಲ್ಲಿ)
	ಖಾಲಿ ಇದೆ			
7	ದಲಾಯತ್	-	-	-
8	ದಲಾಯತ್	-	-	-

ಕ್ಷೇತ್ರಿಯ ಇಲಾಖೆಯ ಮುಖ್ಯಸ್ಥರ ಅಧಿಕಾರಿಗಳ ನಿರ್ದೇಶಿಕೆ:

ಕ್ರಮ ಸಂಖ್ಯೆ	ಹೆಸರು ಮತ್ತು ಹುದ್ದೆ ಶ್ರೀ/ ಶ್ರೀಮತಿ	ವಿಳಾಸ	ದೂರವಾಣಿ ಸಂಖ್ಯೆ
1	ಜಿ.ಸತ್ಯವತಿ, ಭಾ.ಆ.ಸೇ ನಿರ್ದೇಶಕರು	ಪ್ರವಾಸೋದ್ಯಮ ಇಲಾಖೆ ಖನಿಜ ಭವನ, ಬೆಂಗಳೂರು-1	ಕಛೇರಿ: 22352525 ನಿವಾಸ: 22276699 ಮೊ: 9448544846
2	ಕೆ.ಎಲ್. ಬಸವರಾಜ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು	ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ, ದೊಡ್ಡಕೆರೆ ಮೈದಾನ, ಇಂದಿರಾನಗರ, ಮೈಸೂರು	ಕಛೇರಿ: 08212446887 ಮೊ: 9740508827
3	ಡಾ. ಪಿ.ಹರ್ಷ, ಭಾ.ಆ.ಸೇ ವ್ಯವಸ್ಥಾಪಕ ನಿರ್ದೇಶಕರು	ಕರ್ನಾಟಕ ರಾಜ್ಯ ಅಭಿವೃದ್ಧಿ ನಿಗಮ ನಿಯಮಿತ, ನಂ.49, 2ನೇ ಮಹಡಿ, ಖನಿಜ ಭವನ, ಬೆಂಗಳೂರು-01	ಕಛೇರಿ: 22352580 ನಿವಾಸ: 23614060 ಮೊ: 8970650300
4	ಡಿ.ಜೆ.ಹೊಸಮಠ್, ಭಾ.ಅ.ಸೇ ವ್ಯವಸ್ಥಾಪಕ ನಿರ್ದೇಶಕರು	ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ಸಂಸ್ಥೆ, 1ನೇ ಮಹಡಿ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು-01	ಕಛೇರಿ: 25597021/40554044 ಮೊ: 9449457175

4(1)(ಬಿ)(XI): ಎಲ್ಲಾ ಯೋಜನೆಗಳು ಮತ್ತು ವೆಚ್ಚಗಳು ಹಾಗೂ ವಿವರಣೆಯ ಬಗ್ಗೆ ವರದಿಗಳೊಂದಿಗೆ ಪ್ರತಿಯೊಂದು ಅಭಿಕರಣ (ಏಜೆನ್ಸಿ)ಗಳಿಗೆ ನಿಗಧಿಗೊಳಿಸಲಾಗಿರುವ ಆಯವ್ಯಯದ ವಿವರ:

ಇದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಶಾಖೆಯಾಗಿರುವುದರಿಂದ ಮೇಲೆ ಹೇಳಿರುವ ಕಾರ್ಯಗಳು ಸಂಬಂಧಪಡುವುದಿಲ್ಲ.

4(1)(ಬಿ)(XII): ಹಂಚಿಕೆ ಮಾಡಲಾದ ಮೊಬಲಗನ್ನು ಒಳಗೊಂಡು, ಸಹಾಯಧನ ಕಾರ್ಯಕ್ರಮಗಳ ಜಾರಿ ವಿಧಾನ ಮತ್ತು ಅಂತಹ ಕಾರ್ಯಕ್ರಮಗಳ ಫಲಾನುಭವಿಗಳ ವಿವರಗಳು:

ಇದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಶಾಖೆಯಾಗಿರುವುದರಿಂದ ಮೇಲೆ ಹೇಳಿರುವ ಕಾರ್ಯಗಳು ಸಂಬಂಧಪಡುವುದಿಲ್ಲ.

4(1)(ಬಿ)(XIII): ಸರ್ಕಾರದಿಂದ ಮಂಜೂರಾದ ರಿಯಾಯತಿ ದರಗಳು ಅಥವಾ ಅಧಿಕಾರ ಪತ್ರ ಪಡೆಯುವ ವಿವರಗಳು:

ಇದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಶಾಖೆಯಾಗಿರುವುದರಿಂದ ಮೇಲೆ ಹೇಳಿರುವ ಕಾರ್ಯಗಳು ಸಂಬಂಧಪಡುವುದಿಲ್ಲ.

4(1)(ಬಿ)(XIV): ವಿದ್ಯುನ್ಮಾನ ವ್ಯವಸ್ಥೆಯಲ್ಲಿ ಅಳವಡಿಸಿರುವ ಮಾಹಿತಿಗಳ ವಿವರಗಳು:

ಪ್ರವಾಸೋದ್ಯಮ ಇಲಾಖೆಗೆ ಸಂಬಂಧಿಸಿದಂತೆ ಕಡತಗಳ ನಿರ್ವಹಣೆ, ಪತ್ರಗಳ ನಿರ್ವಹಣೆ ಹಾಗೂ ಇವುಗಳ ಚಲನವಲನದ ಬಗ್ಗೆ http://www.karunadu.gov.in ವೆಬ್‌ಸೈಟ್‌ನಲ್ಲಿ ಲಭ್ಯವಿದೆ. ಮೇಲೆ ಉಲ್ಲೇಖಿಸಿದ ಸಚಿವಾಲಯ ವಾಹಿನಿ ತಂತ್ರಾಂಶದಲ್ಲಿ "Status of files" ಲಿಂಕ್‌ನ್ನು ಕ್ಲಿಕ್ ಮಾಡಿ ಕಡತ ಮತ್ತು ಪತ್ರಗಳು ಯಾವ ಇಲಾಖೆಯ ಯಾವ ಅಧಿಕಾರಿಯ ಬಳಿ ಎಂದಿನಿಂದ ಬಾಕಿಯಿದೆಯೆಂದು ತಿಳಿದುಕೊಳ್ಳಬಹುದಾಗಿದೆ.

4(1)(ಬಿ)(XV): ಸರ್ಕಾರದ ಉಪಯೋಗಕ್ಕಾಗಿ ದೊರಕುವುದಿದ್ದಲ್ಲಿ ಸಿದ್ಧಗೊಳಿಸಲಾಗಿರುವ ಪುಸ್ತಕ ಭಂಡಾರ ಅಥವಾ ವಾಚನಾಲಯಗಳ ಕೆಲಸದ ಅವಧಿಯ ವಿವರಗಳನ್ನು ಒಳಗೊಂಡಂತೆ ಮಾಹಿತಿಗಳನ್ನು ಪಡೆಯಲು ನಾಗರಿಕರಿಗೆ ದೊರಕುವ ಸೌಲಭ್ಯಗಳ ಬಗ್ಗೆ ವಿವರಗಳು:

ಪ್ರವಾಸೋದ್ಯಮ ಇಲಾಖೆ ಸಂಬಂದಪಟ್ಟ ಮಾಹಿತಿಗಳು http://www.karunadu.gov.in ವೆಬ್‌ಸೈಟ್‌ನಲ್ಲಿ ನಾಗರಕರು ಪಡೆದುಕೊಳ್ಳಬಹುದಾಗಿದೆ ಹಾಗೂ ಕರ್ನಾಟಕ ಮಾಹಿತಿ ಹಕ್ಕು ಕಾಯ್ದೆಯನ್ವಯ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಳ್ಳಬಹುದು. ಸಾರ್ವಜನಿಕ ಮಾಹಿತಿ ಅಧಿಕಾರಿಗಳ ವಿವರ ಈ ಕೆಳಕಂಡ ಕಂಡಿಕೆ 4(1)(ಬಿ)(XVI) ರಲ್ಲಿ ನೀಡಲಾಗಿದೆ. ಸಾರ್ವಜನಿಕ ಉಪಯೋಗಕ್ಕಾಗಿ ಪುಸ್ತಕ ಭಂಡಾರ ಅಥವಾ ವಾಚನಾಲಯವನ್ನು ನಿರ್ವಹಿಸುತ್ತಿಲ್ಲ.

4(1)(ಬಿ)(XVI): ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರು, ಪದನಾಮಗಳು ಮತ್ತು ಇತರ ವಿವರಗಳು:


ಮಾಹಿತಿ ಹಕ್ಕು ಅಧಿನಿಯಮ 2005 ರ ಕಲಂ 5 ರಡಿಯಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಪದನಾಮಕರಿಸಿದ್ದು, ಅವರಿಗೆ ಸಂಬಂಧಿಸಿದ ವಿವರಗಳನ್ನು ಈ ಕೆಳಕಂಡ ಪಟ್ಟಿಯಲ್ಲಿ ನೀಡಲಾಗಿದೆ.

1	ಅರವಿಂದ ಜಾಧವ್, ಭಾ.ಆ.ಸೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕೊಠಡಿ ಸಂಖ್ಯೆ:4, ನೆಲ ಮಹಡಿ, ವಿಕಾಸ ಸೌಧ, ಬೆಂಗಳೂರು-01.	ಸಾರ್ವಜನಿಕ ಪ್ರಾಧಿಕಾರ
2	ಹೆಚ್.ಕೆ. ರವಿಮೂರ್ತಿ, ಜಂಟಿ ಕಾರ್ಯದರ್ಶಿ, ಕೊಠಡಿ ಸಂಖ್ಯೆ: 13, ನೆಲಮಹಡಿ, ವಿಕಾಸಸೌಧ, ಬೆಂಗಳೂರು.	ಮೇಲ್ಮನವಿ ಪ್ರಾಧಿಕಾರ
3	ಮೋಹನ್.ಕೆ ಸರ್ಕಾರದ ಅಧೀನ ಕಾರ್ಯದರ್ಶಿ, ಕೊಠಡಿ ಸಂಖ್ಯೆ: 15, ನೆಲಮಹಡಿ, ವಿಕಾಸಸೌಧ, ಬೆಂಗಳೂರು.	ಸಾರ್ವಜನಿಕ ಮಾಹಿತಿ ಅಧಿಕಾರಿ
4	ಬಿ.ಎನ್. ಯತಿರಾಜ್, ಶಾಖಾಧಿಕಾರಿ, ಕೊಠಡಿ ಸಂಖ್ಯೆ: 15, ನೆಲಮಹಡಿ, ವಿಕಾಸಸೌಧ, ಬೆಂಗಳೂರು	ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ

4(1)(ಬಿ)(XVII): ನಿಯಮಿಸಬಹುದಾದಂತಹ ಇತರೆ ಮಾಹಿತಿ:

ಈ ಹಿಂದೆ ಮಾಹಿತಿಯನ್ನು ಪ್ರಕಟಿಸಿರುವುದಿಲ್ಲವಾದ್ದರಿಂದ ಅನ್ವಯಿಸುವುದಿಲ್ಲ.

4(1)(ಬಿ) (I):- ಪ್ರವಾಸೋದ್ಯಮ ಇಲಾಖೆಯ ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತಶಾಖೆಯ ರಚನೆ.



ಜಂಟಿ ಕಾರ್ಯದರ್ಶಿಯವರ ಆಪ್ತ ಸಿಬ್ಬಂದಿಯ ಕಾರ್ಯಗಳು ಮತ್ತು ಕರ್ತವ್ಯಗಳು:

ಸಚಿವಾಲಯದ ಕೈಪಿಡಿಯ ಮೇರೆಗೆ ಅಪರ ಮುಖ್ಯ ಕಾರ್ಯದರ್ಶಿಯವರ ಮತ್ತು ಸಚಿವರ ಆದೇಶ ಮತ್ತು ಸೂಚನೆಗಳನ್ನು ಅನುಷ್ಠಾನಗೊಳಿಸುವುದು. ಇಲಾಖೆಯ ಸಂಘಟನಾ ಮತ್ತು ವಿಧಾನಗಳ ಅಧಿಕಾರಿಯಾಗಿ ಕಾರ್ಯ ನಿರ್ವಹಿಸುವುದು. ಅಧೀನಾಧಿಕಾರಿಗಳಿಂದ ಹಾಗೂ ಕಾರ್ಯನಿರತ ಶಾಖೆಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳಿಗೆ ಜಂಟಿ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ

ಅಧಿಕಾರದನ್ವಯ ಅನುಮೋದನೆ ನೀಡುವುದು, ಸಂದರ್ಭಾನುಸಾರ ಕಡತಗಳನ್ನು ಅಪರ ಮುಖ್ಯ ಕಾರ್ಯದರ್ಶಿಯವರ ಅನುಮೋದನೆ, ಅಭಿಪ್ರಾಯ ಅಥವಾ ಆದೇಶಕ್ಕೆ ಸಲ್ಲಿಸುವುದು.

ಪ್ರವಾಸೋದ್ಯಮ ಸಚಿವಾಲಯ ವ್ಯಾಪ್ತಿಯಲ್ಲಿ ಬರುವ ಕ್ಷೇತ್ರ ಇಲಾಖೆಗಳಿಗೆ/ಸಂಸ್ಥೆಗಳಿಗೆ ಸಂಬಂಧಿಸಿದಂತೆ ಆಡಳಿತಾತ್ಮಕ, ಆರ್ಥಿಕ ಹಾಗೂ ಸೇವೆಗಳಿಗೆ ಸಂಬಂಧಿಸಿದಂತಹ ವಿಷಯಗಳ ನಿರ್ವಹಣೆ ಹಾಗೂ ಟೆಂಡರ್ ಬುಲೆಟಿನ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಿರುತಾರೆ. ಮಾಹಿತಿ ಹಕ್ಕು ಅಧಿನಿಯಮ -2005ಕ್ಕೆ ಸಂಬಂಧಪಟ್ಟಂತೆ ಮೇಲ್ಮನವಿ ಪ್ರಾಧಿಕಾರಿಯಾಗಿರುತ್ತಾರೆ. ಸಚಿವಾಲಯ ಇಲಾಖೆ ಮತ್ತು ಅದರ ನಿಯಂತ್ರಣದಲ್ಲಿರುವ ಕ್ಷೇತ್ರ ಇಲಾಖೆ ಮತ್ತು ಸಂಸ್ಥೆಗಳಿಗೆ ಸಂಬಂಧಿಸಿದ ಆಡಳಿತಾತ್ಮಕ ವಿಷಯಗಳು. ಕಛೇರಿ ಕಾರ್ಯ ವಿಧಾನ ಮತ್ತು ಇತರ ಸಂಬಂಧಿತ ವಿಷಯಗಳಿಗೆ ಸಂಬಂಧಪಟ್ಟ ಸ್ಥಾಯಿ ನಿಯಮಗಳು, ಆದೇಶಗಳು ಮುಂತಾದವುಗಳನ್ನು ಜಾರಿಗೊಳಿಸುವುದು ಮತ್ತು ಅವಶ್ಯವಿರುವೆಡೆ ಅವುಗಳ ಪರಿಪಾಲಿತವಾಗುವಂತೆ ನೋಡಿಕೊಳ್ಳುವುದು. ಕಾಲಕಾಲಕ್ಕೆ ಇಲಾಖಾ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳನ್ನು ಅನುಷ್ಠಾನಗೊಳಿಸುವುದು. ಅಧಿಕಾರಿ/ನೌಕರರುಗಳ ಸೇವಾ ವಿಷಯಕ್ಕೆ ಸಂಬಂಧಪಟ್ಟಂತೆ ನಿರ್ಣಯಗಳು, ಸಚಿವಾಲಯದ ಕೈಪಿಡಿಯಲ್ಲಿ ಈ ಹುದ್ದೆಗೆ ಸೂಚಿಸಿರುವಂತೆ ಕಾರ್ಯನಿರ್ವಹಿಸುವುದು.

ಪ್ರವಾಸೋದ್ಯಮ ಇಲಾಖೆಯ ಎಲ್ಲಾ ಶಾಖೆಗಳ ಆಡಳಿತಾತ್ಮಕ ವಿಷಯಗಳಿಗೆ ಸಂಬಂಧಿಸಿದಂತೆ ಜಂಟಿ ಕಾರ್ಯದರ್ಶಿಯವರ ಹುದ್ದೆಗೆ ಪೂರಕ ಸಿಬ್ಬಂದಿ ಆಪ್ತ ಶಾಖೆಯಲ್ಲಿ ಈ ಕೆಳಕಂಡ ಕಾರ್ಯಗಳನ್ನು ನಿರ್ವಹಿಸುತ್ತಾರೆ:-

1. ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಶಾಖೆಯಿಂದ ಸ್ವೀಕರಿಸಲಾಗುವ ಪತ್ರಗಳು ಹಾಗೂ ಕಡತಗಳ ನಿರ್ವಹಣೆ.
2. ನಿರ್ದೇಶಕರುಗಳಿಂದ ಹಾಗೂ ಅಧೀನಾಧಿಕಾರಿಗಳಿಂದ ಸ್ವೀಕೃತವಾಗುವ ಪ್ರಸ್ತಾವನೆ/ಪತ್ರಗಳನ್ನು ಜಂಟಿ ಕಾರ್ಯದರ್ಶಿಯವರ ಅನುಮೋದನೆ ನಂತರ ಸಂಬಂಧಪಟ್ಟ ಶಾಖೆಗಳಿಗೆ ರವಾನಿಸುವುದು.
3. ಜಂಟಿ ಕಾರ್ಯದರ್ಶಿಯವರು ನೀಡುವ ಉಕ್ತಲೇಖನವನ್ನು ತೆಗೆದುಕೊಂಡು ಅದನ್ನು ಬೆರಳಚ್ಚಿಸಿ ಸಂಬಂಧಪಟ್ಟ ಕಡತದಲ್ಲಿ ದಾಖಲಿಸಿ ನೀಡುವುದು.
4. ಅಧಿಕಾರಿಯ ಕಾರ್ಯ ಕಲಾಪ, ಸಭೆ ಮುಂತಾದವುಗಳ ಬಗ್ಗೆ ಮಾಹಿತಿ ನಿರ್ವಹಣೆ.
5. ಸಂದರ್ಶಕರ ಭೇಟಿಯ ನಿರ್ವಹಣೆ.
6. ಆಪ್ತ ಶಾಖೆಗೆ ಸಚಿವಾಲಯ ಕೈಪಿಡಿಯಲ್ಲಿ ವಹಿಸಿರುವ ಇತರೆ ಕಾರ್ಯಗಳು.

<u>4(1)(ಬಿ)(II): ಜಂಟಿ ಕಾರ್ಯದರ್ಶಿಯವರ ಆಪ್ತ ಸಿಬ್ಬಂದಿಯ ಹೊಣೆಗಾರಿಕೆ ಮತ್ತು ಕರ್ತವ್ಯಗಳು</u>

1. <u>ಜಮೇದಾರ್/ದಲಾಯತ್:</u> ಕಛೇರಿಯನ್ನು ಅಚ್ಚುಕಟ್ಟಾಗಿ ಚೊಕ್ಕಟವಾಗಿಡುವುದು. ಇತರೆ ಶಾಖೆಗಳಿಗೆ/ಇಲಾಖೆಗಳಿಗೆ ಕಡತಗಳನ್ನು ಹಾಗೂ ಟಪಾಲುಗಳನ್ನು ಖುದ್ದಾಗಿ ತಲುಪಿಸುವುದು. ಕಛೇರಿಯ ಮೇಲಧಿಕಾರಿಗಳು ಸೂಚಿಸುವ ಕೆಲಸಗಳು ಹಾಗೂ ಸಚಿವಾಲಯದ ಕೈಪಿಡಿಯಲ್ಲಿ ನಿಗಧಿಗೊಳಿಸಿರುವ ಕೆಲಸ ಕಾರ್ಯಗಳು.

2. <u>ಕಿರಿಯ ಸಹಾಯಕರು:</u> ಕಿರಿಯ ಸಹಾಯಕರಿಗೆ ನಿಗಧಿಪಡಿಸಿದ ರಿಜಿಸ್ಟರುಗಳನ್ನು ನಿರ್ವಹಿಸುವುದು, ವಿಷಯದ ಕಡತಗಳನ್ನು ದಾಖಲೆಯಿಡುವುದು ಮತ್ತು ರವಾನಿಸುವುದು. ಇವುಗಳ ಜೊತೆಗೆ ಕಿರಿಯ ಸಹಾಯಕನು, ನಿಗಧಿತ ತ:ಖ್ತೆಗಳ, ನಿಯತಕಾಲಿಕ ಸವಿವರಣೆಗಳ ತಯಾರಿಕೆ, ಜಂಟಿ ಕಾರ್ಯದರ್ಶಿಯವರಿಗೆ ಬರುವ ಕಡತ ಮತ್ತು ಪತ್ರಗಳನ್ನು ಗಣಕಯಂತ್ರದಲ್ಲಿ ಅನುಸರಣೆಗೆ ಚಲನವಲನ ಪುಸ್ತಕದ ಮುಖಾಂತರ ಸ್ವೀಕರಿಸಿ, ಚಲನವಲನ ನಿರ್ವಹಣೆ, ಮೇಲಧಿಕಾರಿಗಳು ಸೂಚಿಸುವ ಇನ್ನಿತರೆ ಕೆಲಸಗಳು ಹಾಗೂ ಸಚಿವಾಲಯದ ಕೈಪಿಡಿಯಲ್ಲಿ ಈ ಹುದ್ದೆಗೆ ಸೂಚಿಸಿರುವ ಇನ್ನಿತರೆ ಕೆಲಸಗಳು.

3. <u>ಶೀಘ್ರಲಿಪಿಗಾರರು:</u> ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆದೇಶದ ಮೇರೆಗೆ ಉಕ್ತಲೇಖನವನ್ನು ತೆಗೆದುಕೊಂಡು ಅದನ್ನು ಶೀಘ್ರವಾಗಿ ಗಣಕಯಂತ್ರದಲ್ಲಿ ಬೆರಳಚ್ಚಿಸಿ ಸಲ್ಲಿಸುವುದು. ದೂರವಾಣಿ ಕರೆಗಳನ್ನು ಸ್ವೀಕರಿಸಿ ವಿಷಯವನ್ನು ಜಂಟಿ ಕಾರ್ಯದರ್ಶಿಯವರಿಗೆ ತಲುಪಿಸುವುದು. ಸಂದರ್ಶಕರು ಬಂದಾಗ ಭೇಟಿಗೆ ಏರ್ಪಾಡು ಮಾಡುವುದು. ಅಧಿಕಾರಿಗಳ ಕಾರ್ಯಕಲಾಪ, ಸಭೆ ಮುಂತಾದವುಗಳ ಬಗ್ಗೆ ಪಟ್ಟಿಯನ್ನು ತಯಾರಿಸಿಡುವುದು ಹಾಗೂ ಅವುಗಳನ್ನು ಅನುಸರಣೆಗೆ ಸಕಾಲದಲ್ಲಿ ಅಧಿಕಾರಿಗಳಿಗೆ ನೆನಪು ಮಾಡುವುದು ಸರ್ಕಾರದ ಜಂಟಿ ಕಾರ್ಯದರ್ಶಿಯವರಿಂದ ಸೂಚಿಸಲ್ಪಟ್ಟ ಇತರೆ ಕಛೇರಿ ಕೆಲಸಗಳು ಹಾಗೂ ಸಚಿವಾಲಯದ ಕೈಪಿಡಿಯಲ್ಲಿ ಈ ಹುದ್ದೆಗೆ ಸೂಚಿಸಿರುವ ಇನ್ನಿತರೆ ಕೆಲಸಗಳು.

<u>4(1)(ಬಿ)(III): ಮೇಲ್ವಿಚಾರಣೆ ಮತ್ತು ಜವಾಬ್ದಾರಿಗಳನ್ನು ಒಳಗೊಂಡಂತೆ, ತೀರ್ಮಾನ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸುವ ಕಾರ್ಯವಿಧಾನ:</u>

<u>ಶೀಘ್ರಲಿಪಿಗಾರರು:</u> ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರಾಗಿ ಕಾರ್ಯ ನಿರ್ವಹಿಸುವರು ಹಾಗೂ ಅವರ ಸೂಚನೆಯ ಮೇರೆಗೆ ಕ್ರಮ ಕೈಗೊಳ್ಳುವರು.

<u>ಕಿರಿಯ ಸಹಾಯಕರು:</u> ಸಚಿವಾಲಯ ಕೈಪಿಡಿ ಮೇರೆಗೆ ಜಂಟಿ ಕಾರ್ಯದರ್ಶಿಯವರಿಗೆ ಬರುವ ಎಲ್ಲಾ ಕಡತಗಳ ಮತ್ತು ಪತ್ರಗಳ ದಿನಚರಿ ಕೆಲಸ, ಚಲನವಲನ ಕೆಲಸ ಹಾಗೂ ರವಾನೆ ಕೆಲಸಗಳನ್ನು ಅಂದಂದೇ ನಿರ್ವಹಿಸುವುದು.

<u>ದಲಾಯತ್:</u> ಕಛೇರಿಯ ಸಮಯಕ್ಕೆ ಮುಂಚೆಯೇ ಹಾಜರಾಗಿ ಕಛೇರಿಯನ್ನು ಸ್ವಚ್ಛವಾಗಿಡುವುದು. ಕಡತ/ಟಪಾಲುಗಳನ್ನು ಸಂಬಂಧಪಟ್ಟ ಶಾಖೆಗಳಿಗೆ ಅಂದಂದೇ ತಲುಪಿಸುವುದು.

4(1)(ಬಿ)(IV): ಕಾರ್ಯಗಳ ನಿರ್ವಹಣೆಗೆ ರೂಪಿಸಿರುವ ಸೂತ್ರಗಳು:

2005ರ ಕರ್ನಾಟಕ ಸರ್ಕಾರ ಸಚಿವಾಲಯದ ಪರಿಷ್ಕೃತ ಕೈಪಿಡಿ ಹಾಗೂ ಕರ್ನಾಟಕ ಸರ್ಕಾರದ (ವ್ಯವಹಾರ ಹಂಚಿಕೆ ನಿಯಮಗಳು 1977) ಹಾಗೂ ಕಾಲಕಾಲಕ್ಕೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಹೊರಡಿಸಲಾಗುವ ಆದೇಶ ಮತ್ತು ಇತರೆ ಸರ್ಕಾರಿ ಸುತ್ತೋಲೆಗಳು.

4(1)(ಬಿ)(V): ಕಾರ್ಯಗಳನ್ನು ನಿರ್ವಹಿಸುವಲ್ಲಿ ಅಧಿಕಾರಿಗಳು/ಸಿಬ್ಬಂದಿಗಳು ಹೊಂದಿರುವ ಅಧಿನಿಯಮಗಳು, ನಿಯಮಗಳು, ಸೂಚನೆಗಳು, ಕೈಪಿಡಿ ಅಥವಾ ದಾಖಲೆಗಳು

1) ಸರ್ಕಾರ ಸಚಿವಾಲಯದ ಕಛೇರಿ ಕೈಪಿಡಿ (ಪರಿಷ್ಕೃತ) 2005
2) ಕರ್ನಾಟಕ ಸರ್ಕಾರ (ಕಾರ್ಯನಿರ್ವಹಣೆ) ನಿಯಮಗಳು 1977
3) ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳು, 1958
4) ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977
5) ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು 1966
6) ಕರ್ನಾಟಕ ನಾಗರಿಕ ಸೇವಾ (ಸಿಸಿಎ) ನಿಯಮಗಳು 1957
7) ಕರ್ನಾಟಕ ಅಧಿಕೃತ ಭಾಷಾ ಅಧಿನಿಯಮ 1963
8) ಮಾಹಿತಿ ಹಕ್ಕು ಅಧಿನಿಯಮ 2005

ಆರ್ಥಿಕ ವಿಷಯಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿನಿಯಮ/ನಿಯಮಗಳನ್ನು ಉಪಯೋಗಿಸಲಾಗುತ್ತಿದೆ:

1) ಕರ್ನಾಟಕ ಆರ್ಥಿಕ ಸಂಹಿತೆ
2) ಖಜಾನೆ ಸಂಹಿತೆ
3) ಸಾದಿಲ್ವಾರು ವೆಚ್ಚದ ಕೈಪಿಡಿ
4) ಅಧಿಕಾರ ಪ್ರತ್ಯಾಯೋಜನೆಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯು ಆಗಿಂದಾಗ್ಗೆ ಹೊರಡಿಸಿರುವ ಆದೇಶ, ಸುತ್ತೋಲೆಗಳು, ನಿಯಮಗಳು
5) ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು 2000

4(1)(ಬಿ)(VI): ಹೊಂದಿರುವ ಅಥವಾ ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ವಿವರ ಪಟ್ಟಿ:

ಸಚಿವಾಲಯ ವಾಹಿನಿಯ ಮೇರೆಗೆ ಸಂಬಂಧಪಟ್ಟ ಶಾಖೆಗಳಲ್ಲಿ ಎಲ್ಲಾ ಕಡತಗಳು ಹಾಗೂ ಹಿಂದೆ ಮುಕ್ತಾಯಗೊಂಡಂತಹ ಪ್ರಮುಖ ಕಡತಗಳು ಲಭ್ಯವಿರುತ್ತವೆ.

4(1)(ಬಿ)(VII): ಕಾರ್ಯನೀತಿ ರಚನೆ ಅಥವಾ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅವರ ಪ್ರಾತಿನಿಧ್ಯ ಇರುವಂತೆ ಮಾಡಲು ಇರುವಂತಹ ಯಾವುದೇ ವ್ಯವಸ್ಥೆಯ ವಿವರಗಳು:

ಆಪ್ತಶಾಖೆಯಲ್ಲಿ ಈ ತರಹದ ವ್ಯವಸ್ಥೆಯನ್ನು ಮಾಡಿಕೊಂಡಿರುವುದಿಲ್ಲ.

